MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 252 | ಭಾನುವಾರ : 20-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 252 | SUNDAY : 20-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕುಡಿಯುವ ನೀರಿನ ತೊಂದರೆಯಾಗದಂತೆ ಕ್ರಮ ಕೈಗೊಳ್ಳಿ: ಎನ್.ಎಸ್.ಬೋಸರಾಜು



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.19–** ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಹಾಗೂ ವಸತಿ ರಹಿತ ಕುಟುಂಬಗಳನ್ನು ಗುರುತಿಸಿ ಅವರಿಗೆ ವಸತಿ ಯೋಜನೆಗಳ ಅಡಿ ಫಲಾನುಭವಿಗಳಿಗೆ ಹಂಚಿಕೆ ಮಾಡುವುದಕ್ಕೆ ಶಾಸಕರ ನೇತೃತ್ವದಲ್ಲಿ ಸಭೆ ನಡೆಸಿ ಫಲಾನುಭವಿಗಳ ಅಂತಿಮ ಪಟ್ಟಿಯನ್ನು ತಯಾರಿಸಿ ನೀಡುವಂತೆ ತಾಲೂಕು ಪಂಚಾಯಿತಿ ಇ.ಓ. ಖಾಲೀದ್ ಅಹಮ್ಮದ್ ರವರಿಗೆ ಸೂಚಿಸಿದರು

ಕುಡಿಯುವ ನೀರು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಕಾಮಗಾರಿಗಳು ಗುಣಮಟ್ಟದಲ್ಲಿರುವಂತೆ ನೋಡಿಕೊಳ್ಳಿ ಹಾಗೂ ಜನರಿಗೆ ಕುಡಿಯುವ ನೀರು ಪೂರೈಕೆ ಮಾಡುವುದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಮಾನ್ವಿ ನಗರದಲ್ಲಿನ ವಿವಿಧ ವಾರ್ಡಗಳಿಗೆ ಸರಿಯಾಗಿ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಹಾಗೂ ಕುಡಿಯುವ ನೀರಿನ ಯೋಜನೆಗಳಾದ ಜೆ.ಜೆ.ಎಂ. ಹಾಗೂ ಅಮೃತ್-2 ಕುಡಿಯುವ ನೀರಿನ ಯೋಜನೆಗಳ ಸಮರ್ಪಕವಾಗಿ ನಡೆಯುವಂತೆ ನೋಡಿಕೊಳ್ಳುವಂತೆ ಹಾಗೂ ಮುಖ್ಯ ರಸ್ತೆ ಹಾಗೂ ರಾಜ ಕಾಲೂವೆಗಳಲ್ಲಿ ಮಳೆನೀರು ನಿಲ್ಲದಸಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮಾನ್ವಿ ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ ರವರಿಗೆ ಸೂಚಿಸಿದರು.

ರೈತರು ಬೆಳೆಯನ್ನು ಬೆಳೆಯುವುದಕ್ಕೆ ಅನುಕೂಲವಾಗಲಿ ಎನ್ನುವ ಉದ್ದೇಶದಿಂದ ಈ ಬಾರಿ ತುಂಗಭದ್ರಜಲಾಶಯದಿಂದ ಕಾಲುವೆಗಳಿಗೆ ನೀರು ಬಿಟ್ಟಿದ್ದು ತಾಲೂಕಿನಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ಕಾಲೂವೆ ಕೋನೆಭಾಗದ ಟೇಲ್ಯಾಂಡ್ ಜಮೀನುಗಳಿಗೂ ಕೂಡ ಸಮರ್ಪಕವಾಗಿ ನೀರು ಹರಿಯುವಂತೆ ನೀರಾವರಿ ಇಲಾಖೆಯ ಅಧಿಕಾರಿಗಳು ಸರಿಯಾಗಿ ನೀರು ನಿರ್ವಹಣೆ ಮಾಡುವ ಮೂಲಕ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ನೀರಾವರಿ ಇಲಾಖೆ ಎ.ಇ.ಇ. ವಿಜಯಲಕ್ಷ್ಮಿ ರವರಿಗೆ ಸೂಚಿಸಿದರು. ಕಾಲೂವೆ ಮೂಲಕ ಅಕ್ರಮವಾಗಿ ನೀರು ಹರಿಸಿಕೊಳ್ಳುತ್ತಿರುವವರ ಮೇಲೆ ಅಗತ್ಯ ಕ್ರಮ ಕೈಗೊಳ್ಳುವುದಕ್ಕೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸಹಕಾರ ನೀಡುವಂತೆ ಮಾನ್ವಿ ಪೊಲೀಸ್ ಠಾಣೆ ಪಿ.ಐ.ಸೋಮಶೇಖರ ಎಸ್.ಕೆಂಚರೆಡ್ಡಿ ರವರಿಗೆ ಸೂಚಿಸಿದರು. (2ನೇಪುಟಕ್ಕೆ)

## ಗ್ರಾಮೀಣ ಪ್ರದೇಶದಲ್ಲಿ ಜಿಪಂ ಸಿಇಓ ಸಂಚಾರ: ಶಾಲೆಗೆ ಭೇಟಿ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.19–** ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ಅವರು ಜುಲೈ 19ರಂದು ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡು ಮಸ್ಕಿ ತಾಲೂಕಿನ ವಟಗಲ್ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದರು.

ಕೂಲಿ ಕಾರ್ಮಿಕರ ಮಕ್ಕಳ ಪಾಲನೆ ಪೋಷಣೆಗಾಗಿ ಆರಂಭಿಸಿದ ಕೂಸಿನ ಮನೆಯ ವೀಕ್ಷಣೆ ನಡೆಸಿದ ಸಿಇಓ ಅವರು ಅಲ್ಲಿನ ಮಕ್ಕಳ ಹಾಜರಾತಿ ಮತ್ತು ಶಿಶು ಪಾಲಕಿಯರ ಕಾರ್ಯವೈಖರಿಯ ಬಗ್ಗೆ ಪರಿಶೀಲಿಸಿದರು.

ಪ್ರತಿನಿತ್ಯ ಶಿಶುಪಾಲನಾ ಕೇಂದ್ರದಲ್ಲಿ ವಿತರಿಸುವ ಆಹಾರದ ಕುರಿತು ಶಿಶು ಪಾಲಕಿಯರು ಮಕ್ಕಳಿಂದ ಮಾಹಿತಿ ಪಡೆದರು. ಮಕ್ಕಳಿಗೆ ವಿತರಿಸಲು ತಯಾರಿಸಿದ ಬೇಯಿಸಿದ ಮೊಟ್ಟೆ, ಶೇಂಗಾದ ಗುಣಮಟ್ಟ ಪರಿಶೀಲಿಸಿದರು.

ಜಿಲ್ಲಾ ಪಂಚಾಯತಿಯ ನಿರ್ದೇಶನದಂತೆ ಕೂಸಿನ ಮನೆಗಳಲ್ಲಿ ಆಹಾರ ಪಟ್ಟಿಯನ್ನು (ಫುಡ್ ಮೆನು) ಪ್ರದರ್ಶಿಸಿ ಅದರಂತೆ ಮಕ್ಕಳಿಗೆ ಆಹಾರ ಒದಗಿಸಬೇಕು. ಗ್ರಾಮ ಪಂಚಾಯಿತಿಯಿಂದ ಕೂಸಿನ ಮನೆ



ಆರಂಭಿಸಿರುವ ಬಗ್ಗೆ ಪ್ರಚಾರ ನಡೆಸಿ, ಮಕ್ಕಳ ಸಂಖ್ಯೆ ಹೆಚ್ಚಳಕ್ಕೆ ಕ್ರಮಕೈಗೊಳ್ಳಬೇಕು. ಶಿಶು ಪಾಲಕಿಯರಿಗೆ ಎನ್‌ಎಂಆರ್ ಗಳನ್ನು ತೆಗೆದು ಕೂಲಿ ಪಾವತಿಸಬೇಕು ಎಂದು ಇದೆ ವೇಳೆ ಸಿಇಓ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೆ ವೇಳೆ ಸಿಇಓ ಅವರು ಪ್ರಾಥಮಿಕ ಶಾಲೆಯ 8ನೇ ತರಗತಿಗೆ ಭೇಟಿ ನೀಡಿ ಮಕ್ಕಳೊಂದಿಗೆ ಮಾತನಾಡಿ ರಾಜ್ಯದ ಸಂಕ್ಷಿಪ್ತ ಮಾಹಿತಿ, ಕೇಂದ್ರ ಆಡಳಿತ ಪ್ರದೇಶಗಳ ಸಂಖ್ಯೆ ಕುರಿತು ಮಕ್ಕಳಿಂದ ಮಾಹಿತಿ ಪಡೆದರು.

ಇದೆ ವೇಳೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಮರೇಶ್, ಸಹಾಯಕ ನಿರ್ದೇಶಕರಾದ ಶಿವಾನಂದ ರಡ್ಡಿ, ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿ ಸೋಮನಗೌಡ ಪಾಟೀಲ್, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ತಿಮ್ಮನಗೌಡ, ತಾಂತ್ರಿಕ ಸಂಯೋಜಕರಾದ ಅಶೋಕ್, ತಾಂತ್ರಿಕ ಸಹಾಯಕ ಅಭಿಯಂತರರಾದ ಪ್ರದೀಪ್, ಗ್ರಾಪಂ ಅಧ್ಯಕ್ಷರು, ಸದಸ್ಯರು, ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಅಭಿಯಂತರರಾದ ಬಸವರಾಜು, ವಿವಿಧ ಇಲಾಖೆ ಅಧಿಕಾರಿಗಳು, ತಾಪಂ ಮತ್ತು ಗ್ರಾಪಂ ಸಿಬ್ಬಂದಿ ಉಪಸ್ಥಿತರಿದ್ದರು.

## ಸಿರವಾರ ತಾಲೂಕಿನಲ್ಲಿ ವಿದ್ಯುತ್ ವ್ಯತ್ಯಯ ತಡೆಗೆ ಕ್ರಮಕ್ಕೆ ಸಚಿವರ ಸೂಚನೆ

ಯುವ ಮಾರ್ಗ ಸುದ್ದಿ

**ಸಿರವಾರ,ಜು.19–** ತಾಲ್ಲೂಕು ಕೇಂದ್ರ ಮತ್ತು ಗ್ರಾಮೀಣ ಭಾಗದಲ್ಲಿ ಪದೇ ಪದೇ ವಿದ್ಯುತ್ ವ್ಯತ್ಯಯವಾಗುತ್ತಿರುವ ಬಗ್ಗೆ ಸಾರ್ವಜನಿಕರು ಹಾಗೂ ರೈತರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ, ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವ ಎನ್.ಎಸ್. ಬೋಸರಾಜು ಅವರು ಜೆಸ್ಕಾಂ ಅಧಿಕಾ ರಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ವಿದ್ಯುತ್ ವ್ಯತ್ಯಯ ತಡೆಗಟ್ಟಲು ವೈಜ್ಞಾನಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಸೂಚಿಸಿದ್ದಾರೆ.

ಸಿರವಾರದ ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದ ನಂತರ, ಜೆಸ್ಕಾಂ ಅಧಿಕಾರಿಗಳೊಂದಿಗೆ ವಿದ್ಯುತ್ ಸಮಸ್ಯೆಗಳ ಕುರಿತು ಸಚಿವರು ಚರ್ಚಿಸಿದರು. "ವಿದ್ಯುತ್ ವ್ಯತ್ಯಯದಿಂದ ಕುಡಿಯುವ ನೀರು ಪೂರೈಕೆ, ರೈತರ ಕೃಷಿ ಚಟುವಟಿಕೆಗಳು ಹಾಗೂ ಸಾರ್ವಜನಿಕರ ದೈನಂದಿನ ಜೀವನಕ್ಕೆ ತೊಂದರೆಯಾಗುತ್ತಿದೆ. ಸಣ್ಣಪುಟ್ಟ ಸಮಸ್ಯೆಗಳನ್ನು ತಕ್ಷಣವೇ ಸರಿಪಡಿಸಿ, (2ನೇಪುಟಕ್ಕೆ)



## ಲಿಂಗಸುಗೂರಿಗೆ 55 ಬಸ್ ಕೊಡಿ ಸಾರಿಗೆ ಸಚಿವರಿಗೆ ಡಿ.ಎಸ್.ಹೂಲಗೇರಿ ಮನವಿ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಜು.19–** ರಾಯಚೂರು ಜಿಲ್ಲೆಯಲ್ಲಿಯೇ ಲಿಂಗಸುಗೂರು ಸಾರಿಗೆ ಘಟಕ 131 ಮಾರ್ಗಗಳನ್ನು ಹೊಂದಿದ ದೊಡ್ಡ ಘಟಕವಾಗಿದೆ. "ಈಗಿರುವ ಬಸ್‌ಗಳು ಹಳೆಯದಾಗಿರುವ ಪರಿಣಾಮ 50 ಹೊಸ ಬಸ್‌ಗಳು ಮತ್ತು 5 ಸ್ಲೀಪರ್ ಸೇರಿ ಒಟ್ಟು 55 ಬಸ್‌ಗಳನ್ನು ಕೊಡ ಎಂದು ಮಾಜಿ ಶಾಸಕ ಹಾಗೂ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಡಿ.ಎಸ್.ಹೋಲಗೇರಿ ಒತ್ತಾಯಿಸಿದ್ದಾರೆ.

ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರಿಗೆ ಈಚೆಗೆ ಪತ್ರ ಬರೆದಿರುವ ಅವರು, ಲಿಂಗಸುಗೂರು ತಾಲೂಕಿನಲ್ಲಿ ರಾಷ್ಟ್ರೀಯ, ರಾಜ್ಯ, ಜಿಲ್ಲಾ ಹೆದ್ದಾರಿಗಳು ಹಾದು ಹೋಗಿವೆ. ಹಟ್ಟಿ ಚಿನ್ನದಗಣಿ, ಐತಿಹಾಸಿಕ ಮುದಗಲ್ ಪಟ್ಟಣ ಸೇರಿ ನೂರಾರು ಹಳ್ಳಿಗಳನ್ನು ಒಳಗೊಂಡ ತಾಲೂಕು ಇದಾಗಿದೆ. ಹೆಚ್ಚಿನ ಮಾರ್ಗ ಇರುವ ಪರಿಣಾಮ ಮತ್ತು ಇರುವ ಬಸ್‌ಗಳು ಹಳೆಯದಾಗಿರುವ ಕಾರಣ ಸಾರ್ವಜನಿಕರಿಗೆ ಸಕಾಲಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ಕೂಡಲೇ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಹೂಲಗೇರಿ ಒತ್ತಾಯಿಸಿದ್ದಾರೆ.

## ಹಕ್ಕಿಗಳ ಕೂಗಿಗೆ ಸ್ಪಂದಿಸಿದ ಮಕ್ಕಳು

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.19–**ಪಟ್ಟಣದ ಸಂಗಾಪೂರ್ ರಸ್ತೆಯಲ್ಲಿ ಕೆಲವರು ಅರಳಿ ಮರದ ಕೊಂಬೆಗಳನ್ನು ಕತ್ತರಿಸಿ ತಂದು ಹಾಕಿದರು ಅರಳಿ ಮರದಲ್ಲಿನ ಗೂಡುಗಳಲ್ಲಿದ್ದ 50 ಕ್ಕೂ ಹೆಚ್ಚು ಕೊಕ್ಕರೆ ಜಾತಿಯ ಮರಿಗಳು ಮೈದಾನದಲ್ಲಿ ಗಾಯಗೊಂಡು ನರಳುತ್ತಿರುವದನ್ನು ಕಂಡ ಸುತ್ತಮುತ್ತಲಿನ ಮಕ್ಕಳು ಹಕ್ಕಿಗಳ ಕೂಗಿಗೆ ಮಿಡಿದು ಕೊಕ್ಕರೆಗಳನ್ನು ಜೋಪಾನವಾಗಿ ರಕ್ಷಿಸಿ ನಾಯಿಗಳಿಗೆ ಮತ್ತು ಇತರ ಪ್ರಾಣಿಗಳಿಗೆ ಆಹಾರವಾಗದಂತೆ ಕಾಪಾಡಿ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದರು ಮಕ್ಕಳ ಕರೆಗೆ ಸ್ಪಂದಿಸಿದ ಮಾನ್ವಿ ವಲಯ ಅರಣ್ಯಾಧಿಕಾರಿ ಪುರುಷೋತ್ತಮ ತಮ್ಮ ಸಿಬ್ಬಂದಿಗಳನ್ನು ಸ್ಥಳಕ್ಕೆ ಕಳುಹಿಸಿ ಹಕ್ಕಿಗಳನ್ನು ರಕ್ಷಿಸಿ ಪಕ್ಷೀ ಪ್ರೇಮಿ ಸಲ್ಲಾವು ದ್ದಿನ್ ರವರ ಮನೆಗೆ ಹಕ್ಕಿಗಳನ್ನು ಸಂರಕ್ಷಿಸುವುದಕ್ಕಾಗಿ ಕಳುಹಿಸಿಕೊಟ್ಟರು.

ಮಾನ್ವಿ ವಲಯ ಅರಣ್ಯಾಧಿಕಾರಿ ಪುರುಷೋತ್ತಮ ಮಾತನಾಡಿ, ಮಾನ್ವಿ ಪಟ್ಟಣದಲ್ಲಿ ಚತುಷ್ಪತ ರಸ್ತೆ ನಿರ್ಮಾಣ ಕಾಮಗಾರಿಗೆ ಮಾತ್ರ ರಸ್ತೆ ಬದಿಯಲ್ಲಿರುವ ಮರಗಳನ್ನು ಕಡಿಯುವುದಕ್ಕೆ ಅನುಮತಿ ನೀಡಲಾಗಿದೆ ,ಇಲ್ಲಿ ಹಾಕಿರುವ ಮರ




ಗಳನ್ನು ಎಲ್ಲಿ ಕಡಿಯಲಾಗಿದ್ದೆ ಎನ್ನುವು ದನ್ನು ಪರಿಸೀಲಿಸಲಾಗುತ್ತಿದೆ ಅನುಮತಿ ಇಲ್ಲದೆ ಮರ ಕಡಿಯುವವರ ಮೇಲೆ ಕಾನೂನು ಪ್ರಕಾರ ಪ್ರಕರಣ ದಾಖಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಮಕ್ಕಳು ನೀಡಿದ ಮಾಹಿತಿಯಂತೆ ಹತ್ತಕ್ಕೂ ಹೆಚ್ಚು ಕೋಕರೆ ಜಾತಿಯ ಹಕ್ಕಿಗಳನ್ನು ರಕ್ಷಿಸಿ ಅವುಗಳನ್ನು ಸಂರಕ್ಷಿಸುವುದಕ್ಕಾಗಿ ಪಕ್ಷೀ ಪ್ರೇಮಿ ಸಲ್ಲಾವುದ್ದಿನ್ ರವರಿಗೆ ನೀಡಲಾಗಿದೆ ಎಂದು ತಿಳಿಸಿದರು.


ಪಕ್ಷೀ ಪ್ರೇಮಿ ಸಲ್ಲಾವುದ್ದಿನ್ ಮಾತನಾಡಿ ಮಳೆಗಾಲದಲ್ಲಿ ಪಕ್ಷಿಗಳು ಮರಗಳಲ್ಲಿ ಗೂಡು ಕಟ್ಟಿ ಮೊಟ್ಟೆ ಇಟ್ಟು ಮರಿಗಳನ್ನು ಮಾಡಿಕೊಳ್ಳುತ್ತವೆ ಅದ್ದರಿಂದ ರಸ್ತೆಯ ಎರಡು ಕಡೆಗಳಲ್ಲಿ ಬೆಳೆದಿರುವ ಮರ ಗಿಡಗಳಲ್ಲಿ ಸಾವಿರಾರು ವಿವಿಧ ಜಾತಿಯ ಪ್ರಬೇಧದ ಪಕ್ಷಿಗಳು ಮರಿಗಳನ್ನು ಇಟ್ಟಿದ್ದು ಮರ ಕಡಿಯುವವರು ಮೋದಲು ಗಿಡಗಳಲ್ಲಿ ಪಕ್ಷಿಗಳ ಗೂಡು ಇರುವ ಬಗ್ಗೆ ಪರಿಶೀಲಿಸಿ ಗೂಡುಗಳು ಇದ್ದಲ್ಲಿ ಗೂಡಿನಲ್ಲಿರುವ ಮರಿಗಳನ್ನು ಸುರಕ್ಷಿತವಾದ ಸ್ಥಳಗಳಲ್ಲಿ ಸಂರಕ್ಷಿಸಿದ ನಂತರವೇ ಮರಗಿಡಗಳನ್ನು ಕಡಿಯಬೇಕು ಹಾಗೂ ಈ ಕುರಿತು ಅರಣ್ಯ ಇಲಾಖೆಯ ಅಧಿಕಾರಿಗಳು ಕೂಡ ಪರಿಶೀಲಿಸಿ ಪಕ್ಷಿಗಳ ರಕ್ಷಣೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು

## ವೋಟಿಂಗ್ ಮಷಿನ್ ಆ್ಯಪ್ ಮೂಲಕ ಮತದಾನ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶಾಲಾ ಸಂಸತ್ತು ಚುನಾವಣೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.19–**ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ತು ಚುನಾವಣೆಯನ್ನು ಶನಿವಾರ ನಡೆಸಲಾಯಿತು.

ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಮತದಾನ ಮಾಡುವ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.ಸಾರ್ವತ್ರಿಕ ಚುನಾವಣೆಯಂತೆ ಶಾಲಾ ಸಂಸತ್ತು ಚುನಾವಣೆಯನ್ನು ನಡೆಸಲಾಯಿತು. ವಿದ್ಯಾರ್ಥಿಗಳು ಮತದಾನ ಮಾಡಲು ಮೊಬೈಲ್‌ನಲ್ಲಿ ಎಲೆಕ್ಟ್ರಾನಿಕ್ ವೋಟಿಂಗ್ ಮಿಷನ್ ಇವಿಎಂ ಆ್ಯಪ್ ಸಿದ್ಧಪಡಿಸಲಾಗಿತ್ತು. ವಿದ್ಯಾರ್ಥಿಗಳು ಮೊಬೈಲ್ ಆ್ಯಪ್ ಮೂಲಕ ಚುನಾವಣೆಯಲ್ಲಿ ಸ್ಪರ್ದಿಸಿದ್ದ ಅಭ್ಯರ್ಥಿಗಳಿಗೆ ಮತದಾನ ಮಾಡಿದರು. ಶಾಲಾ ಸಂತ್ತು ಚುನಾವಣೆಗೆ ಒಟ್ಟು 24 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ವಿದ್ಯಾರ್ಥಿಗಳು ಸರತಿ ಸಾಲಿನಲ್ಲಿ ನಿಂತು ಮತದಾನ ಮಾಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಉಪಪ್ರಾಂಶುಪಾಲ ಸುಧಕಾರ್ ಸಂಜೀವ, ಶಾಲಾ ಸಂಸತ್ತು ಕೇವಲ ಒಂದು ಸ್ಥಾನವಲ್ಲ, ಅದು ಜವಬ್ದಾರಿ. ವಿದ್ಯಾರ್ಥಿಳು ತಮ್ಮ ಸಹಪಾಠಿಗಳ ಧ್ವನಿಯಾಗಿ ಕಾರ್ಯನಿರ್ವಹಿಸಿ, ಶಾಲಾ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಕರೆ ನೀಡಿದರು.

ಬಿಆರ್‌ಪಿಗಳಾದ ನಾಗಪ್ಪ ಮತ್ತು ಸುರೇಶ್ ಬೆಸ್ತವಾಡೆ ಶಾಲೆಗೆ ಭೇಟಿ ನೀಡಿ ಮತದಾನದ ಪ್ರಾತ್ಯಕ್ಷಿಕೆ ವೀಕ್ಷಿಸಿದರು.

ಚುನಾವಣೆ ಕರ್ತವ್ಯವನ್ನು ಶಿಕ್ಷಕರಾದ ರೇಖಾದೇವಿ, ಬಂಡೆಮ್ಮ, ಅಶೋಕ ಕುಮಾರ ಮಳ್ಳಿ, ರಜನಿ, ಮಂಜುಳ ಹಿರೇಮಠ, ಚನ್ನಬಸವರಾಜ, ಶ್ರೀಮತಿ ಕಟ್ಟಿ, ಶೇಖ್ ಹುಸೇನ್, ಜೈಭೀಮ ಭಾವಿಕಟ್ಟಿ, ಶರಣಮ್ಮ, ನುಜಹತ್ ಫಾತಿಮಾ, ಪ್ರಮೋದ್ ಕುಮಾರ್, ಅನ್ವರ್ ಹುಸೇನ್, ಶರತ್‌ಕುಮಾರ, ರಾಜಶೇಖರ.ಎಚ್,ರೇಣುಕಾ ನಿರ್ವಹಿಸಿದರು.

## ಮೊದಲನೇಯ ಪುಟದಿಂದ

# ಕುಡಿಯುವ ನೀರಿನ ತೊಂದರೆಯಾಗದಂತೆ ಕ್ರಮ ಕೈಗೊಳ್ಳಿ: ಎನ್.ಎಸ್.ಬೋಸರಾಜು

ಮುಂಗಾರು ಹಂಗಾಮಿನಲ್ಲಿ ತಾಲೂಕಿನಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ತಾಲೂಕಿನಲ್ಲಿ ರೈತರು ಕೃಷಿ ಚಟುವಟಿಕೆಗಳನ್ನು ಪ್ರಾರಂಭಿಸಿದ್ದು ಕೃಷಿ ಇಲಾಖೆಯ ಅಧಿಕಾರಿಗಳು ರೈತರಿಗೆ ಅಗತ್ಯವಾಗಿರುವ ಬೀಜ ಗೊಬ್ಬರ ಕೊರತೆಯಾಗದಂತೆ ಅಗತ್ಯ ದಾಸ್ತನು ಇರುವಂತೆ ನೋಡಿಕೊಳ್ಳಬೇಕು ಎಂದು ತಾ.ಕೃಷಿ ಸಹಾಯಕ ನಿರ್ದೇಶಕರಾದ ಗುರುನಾಥ ಭೂಸನೂರ್ ರವರಿಗೆ ಸೂಚಿಸಿದರು.

ರೈತರು ನಾಟಿ ಕಾರ್ಯ ಕೈಗೊಂಡಿರುವುದರಿಂದ ರೈತರ ಪಂಪ್ ಸೇಟ್ ಗಳಿಗೆ ನಿರಂತರವಾದ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳುವಂತೆ ಜೆಸ್ಕಾಂ ಇಲಾಖೆಯ ಎ.ಇ. ವೈದ್ಯಾನಾಥಸ್ವಾಮಿರವರಿಗೆ ಸೂಚಿಸಿದರು.

ಮಳೆಗಾಲ ಪ್ರಾರಂಭವಾಗಿರುವುದರಿಂದ ಕುಡಿಯುವ ನೀರು ಕಲುಷಿತವಾಗುವ ಸಾಧ್ಯತೆ ಹೆಚ್ಚಿರುತ್ತದೆ ಹಾಗೂ ಸಾಂಕ್ರಮಿಕ ಕಾಯಿಲೆಗಳು ಹರಡುವ ಸಾಧ್ಯತೆ ಹೆಚ್ಚಿರುವುದರಿಂದ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಔಷಾಧಿಗಳ ಕೋರತೆಯಾಗದಂತೆ ನೋಡಿಕೊಳ್ಳುವಂತೆ ತಾಲೂಕ ವೈದ್ಯಾಧಿಕಾರಿ ಡಾ.ಶರಣಬಸವರಾಜ ರವರಿಗೆ ಸೂಚಿಸಿದರು.

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವ ಕಡೆ ಅತಿಥಿ ಶಿಕ್ಷಕರ ನೇಮಕಕ್ಕೆ ಕ್ರಮ ಕೈಗೊಳ್ಳುವಂತೆ ಹಾಗೂ ಫಲಿತಾಂಶ ಹೆಚ್ಚಳಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಾ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ ರವರಿಗೆ ಸೂಚಿಸಿದರು

ಸಿರವಾರ ತಾಲೂಕು ಪಂಚಾಯಿತಿ ಇ.ಓ.ಶ್ರೀಧರಸ್ವಾಮಿ ಸೇರಿದಂತೆ ಮಾನ್ವಿ .ಸಿರವಾರ ತಾಲೂಕುಗಳ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ತಮ್ಮ ಇಲಾಖೆಯ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಮಾನ್ವಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫರ್ ಸಾಬ್, ಪಂಚ ಗ್ಯಾರಂಟಿ ಅಧ್ಯಕ್ಷರಾದ ಬಿ.ಕೆ. ಅಂಬರೇಶಪ್ಪ , ಸೈಯದ್ ಖಲೀದ್ ಖಾದ್ರಿ , ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿರವಾರ ತಾಲೂಕಿನಲ್ಲಿ ವಿದ್ಯುತ್ ವ್ಯತ್ಯಯ ತಡೆಗೆ ಕ್ರಮಕ್ಕೆ ಸಚಿವರ ಸೂಚನೆ

ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು" ಎಂದು ಸಚಿವರು ಅಧಿಕಾರಿಗಳಿಗೆ ತಾಕೀತು ಮಾಡಿದರು. ಮುಂದಿನ ದಿನಗಳಲ್ಲಿ ಇದೇ ರೀತಿ ವಿದ್ಯುತ್ ವ್ಯತ್ಯಯ ಮುಂದುವರಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಸಚಿವರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಅಶೋಕ ಪವಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಸ್ವಾಮಿ, ಜೆಸ್ಕಾಂ ಅಧಿಕಾರಿಗಳು, ಹಾಗೂ ಕಾಂಗ್ರೆಸ್ ಮುಖಂಡರಾದ ಚುಕ್ಕಿ ಸೂಗಪ್ಪ, ಕೆ. ಶಾಂತಪ್ಪ, ಬ್ರಿಜೇಶ್ ಪಾಟೀಲ್, ಪಟ್ಟಣ ಪಂಚಾಯಿತಿ ಅಧ್ಯಕ್ಷ ಭೂಪನಗೌಡ ಪಾಟೀಲ್, ಶಿವಾನಂದ ಚುಕ್ಕಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನಿರ್ಮಲಾ ಬೆಣ್ಣಿ, ಜಿ. ಶಿವಮೂರ್ತಿ, ರುದ್ರಪ್ಪ ಅಂಗಡಿ, ಶಿವು ಅರಕೇರಿ, ಅಮರೇಗೌಡ ಹಂಚಿನಾಳ, ಬಸವರಾಜ ಪಾಟೀಲ್, ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ರೇಣುಕಾ, ಮಾಜಿ ತಾ.ಪಂ. ಅಧ್ಯಕ್ಷ ದಾನಗೌಡ ಸಿರವಾರ, ನಾಗಪ್ಪ ನವಲಕಲ್, ಹಾಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಾನ್ವಿಯಲ್ಲಿ ಶ್ರೀ ಬೈರಾ ಆಂಜನೇಯ್ಯ ಸ್ವಾಮಿಯ ನೂತನ ದೇವಸ್ಥಾನ ಲೋಕಾರ್ಪಣೆ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಜು.19–** ಪಟ್ಟಣದ ಕಾತರಕಿ ರಸ್ತೆಯ ಪೂಜಾ ರೈಸ್ ಮಿಲ್ ಹತ್ತಿರ ನಿರ್ಮಾಣ ಗೊಂಡಿರುವ ಶ್ರೀ ಬೈರಾ ಆಂಜನೇಯ್ಯ ಸ್ವಾಮಿಯ ನೂತನ ದೇವಾಲಯ ಲೋಕಾರ್ಪಣೆ ಹಾಗೂ ಮೂರ್ತಿ ಪ್ರಾಣ ಪ್ರತಿಷ್ಠಾಪನೆಯ ಮಹೋತ್ಸವವು ಇಂದಿನಿಂದ ಜು.26ರ ತನಕ ಭಕ್ತಿಭಾವಪೂರ್ಣವಾಗಿ ನಡೆಯಲಿದೆ.

ಈ ಧಾರ್ಮಿಕ ಕಾರ್ಯಕ್ರಮವು ಪರಮಪೂಜ್ಯ ಶ್ರೀ ಶ್ರೀಗಳ ಅಮೃತ ಸಾನಿಧ್ಯದಲ್ಲಿ, ನಾನಾ ಪೂಜಾ ವಿಧಿ ವಿಧಾನಗಳೊಂದಿಗೆ ವಿಜೃಂಭಣೆಯಿಂದ ಜರುಗಲಿದೆ. ಈ ಮಹೋತ್ಸವದಲ್ಲಿ ಪರಮ ಪೂಜ್ಯ ಶ್ರೀ ಮ.ಘ.ಚ. ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಶ್ರೀ ಮಹಾಂತೇಶ್ವರ ಮಠ, ಕರೇಗುಡ್ಡ, ಪರಮಪೂಜ್ಯ ಶ್ರೀ ಷ.ಬ್ರ. ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಮುಕ್ತಗುಚ್ಛ ಬೃಹನ್ಮಠ, ಕಲ್ಮಠ, ಮಾನವಿ, ಪರಮಪೂಜ್ಯ ಶ್ರೀ ಮ.ನಿ.ಪ್ರ. ಸದಾಶಿವ ಮಹಾಸ್ವಾಮಿಗಳು ಶ್ರೀ ರುದ್ರಮುನೀಶ್ವರ ಮಠ, ಚೀಕಲಪರ್ವಿ ಮತ್ತು ಪರಮ ಪೂಜ್ಯ ಶ್ರೀ ವೇ.ಮೂ. ಶಂಕರಯ್ಯ ಸ್ವಾಮಿ ಸುವರ್ಣಗಿರಿ ಮಠ, ಮಾನ್ವಿ ಇವರು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಲಿದ್ದಾರೆ.

ಜು.20, ಬೆಳಿಗ್ಗೆ 9:30 ರಿಂದ ಶ್ರೀ ಉದ್ದವ ಆಂಜನೇಯ್ಯ ಸ್ವಾಮಿ ದೇವಸ್ಥಾನದಿಂದ ನೂತನ ದೇವಸ್ಥಾನದವರೆಗೆ ಮೂರ್ತಿ ಮೆರವಣಿಗೆ. ಡೊಳ್ಳು, ಭಜಂತ್ರಿ, ವೀರಗಾಸೆ, ಕೋಲಾಟ, ಕುಂಭಗಳೊಂದಿಗೆ ಶೋಭಾ ಯಾತ್ರೆ. ಜುಲೈ 24, 2025 (ಗುರುವಾರ) ಸಂಜೆ 6:00 ರಿಂದ ಪೂರ್ವಪೂಜೆ: ಮಹಾಗಣಪತಿ ಪೂಜೆ, ನವಗ್ರಹ ಶಾಂತಿ, ವಾಸ್ತುಶಾಂತಿ, ಪಂಚಕಲಶ, ರುದ್ರಹೋಮ ಇತ್ಯಾದಿ. ರಾತ್ರಿ 9:00 ರಿಂದ ಭಜನೆ ಕಾರ್ಯಕ್ರಮ.ಜುಲೈ 25, 2025 (ಶುಕ್ರವಾರ) ಬೆಳಿಗ್ಗೆ 7:45ಕ್ಕೆ ಸಿಂಹ ಲಗ್ನದಲ್ಲಿ ಶ್ರೀಗಳ ಅಮೃತ ಹಸ್ತದಿಂದ ಮೂರ್ತಿ ಪ್ರಾಣಪ್ರತಿಷ್ಠಾಪನೆ. ಮಧ್ಯಾಹ್ನ 1:00 ರಿಂದ ಪ್ರಸಾದ ವಿತರಣೆ. ಸಂಜೆ 5:00 ರಿಂದ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ.ಜು. 26, 2025 (ಶನಿವಾರ) ಬೆಳಿಗ್ಗೆ 9:30 ರಿಂದ ಗಂಗಾಪೂಜೆ. ನಂತರ ಜಡೆಬಸವೇಶ್ವರ ದೇವಸ್ಥಾನದಿಂದ ನೂತನ ದೇವಸ್ಥಾನವರೆಗೆ ಪಲ್ಲಕ್ಕಿ ಉತ್ಸವ. ಸಂಜೆ 7:00 ರಿಂದ ಪ್ರಸಾದ ವಿತರಣೆ ಹಾಗೂ ರಾತ್ರಿ 9:00 ರಿಂದ ಭಜನೆ ಕಾರ್ಯಕ್ರಮ.

ಈ ಕಾರ್ಯಕ್ರಮವನ್ನು ಶ್ರೀ ಬೈರಾ ಆಂಜನೇಯ್ಯ ಸ್ವಾಮಿ ದೇವಸ್ಥಾನ ಸೇವಾ ಟ್ರಸ್ಟ್ (ರಿ) ಮಾನ್ವಿ ಇವರ ಆಶ್ರಯದಲ್ಲಿ ನಡೆಸಲಾಗುತ್ತಿದ್ದು, ಶ್ರೀ ಮಹೇಶ ಕುಮಾರ ಅರ್ಚಕರು ಅವರ ನೇತೃತ್ವದಲ್ಲಿ ಸಿದ್ಧತೆಗಳು ಜೋರಾಗಿವೆ. ವಿವಿಧ ಗ್ರಾಮಗಳಿಂದ ಭಕ್ತಾದಿಗಳು, ಗ್ರಾಮಸ್ಥರು, ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಸಾರ್ವಜನಿಕರಿಗೆ ಮುಕ್ತ ಆಹ್ವಾನವಿದ್ದು, ಶ್ರೀ ಬೈರಾ ಆಂಜನೇಯ್ಯ ಸ್ವಾಮಿಯ ಕೃಪೆಗೆ ಪಾತ್ರರಾಗಲು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಟ್ರಸ್ಟ್ ವಿನಂತಿಸಿಕೊಂಡಿದೆ.

# ಗ್ರಾಮ ಆಡಳಿತ ಅಧಿಕಾರಿ ನಾಗೇಂದ್ರ ಅವರನ್ನು ಪುನಃ ನೇಮಿಸುವಂತೆ ಗ್ರಾಮಸ್ಥರ ಮನವಿ

**ಯುವ ಮಾರ್ಗ ಸುದ್ದಿ**


**ಸಿರವಾರ,ಜು.19–**ತಾಲೂಕಿನ ನವಲಕಲ್ ಗ್ರಾಪಂ ವ್ಯಾಪ್ತಿಯಲ್ಲಿ ಗ್ರಾಮ ಆಡಳಿತ ಅಧಿಕಾರಿಯಾಗಿ ಅನೇಕ ವರ್ಷಗಳಿಂದ ನಾಗೇಂದ್ರ ಅವರು ಕಾರ್ಯನಿರ್ವಹಿಸುತ್ತಿದ್ದರು, ಆದರೆ ಕೆಲ ತಿಂಗಳಿಂದ ಅವರನ್ನು ಮಲ್ಲಟ, ಎನ್ ಹೊಸೂರು ಭಾಗಕ್ಕೆ ವರ್ಗಾವಣೆ ಮಾಡಲಾಗಿದೆ. ಇದರಿಂದಾಗಿ ರೈತರಿಗೆ, ತೊಂದರೆಯಾಗಿದೆ. ವಯೋ ವೃದ್ಧರಿಗೆ, ವಿಕಲಾಂಗರಿಗೆ ವಿದ್ಯಾರ್ಥಿಗಳಿಗೆ, ಆದರಿಂದ ಅವರನ್ನು ಪುನಃ ನವಲಕಲ್ ಗ್ರಾಮ ಆಡಳಿತ ಅಧಿಕಾರಿಯಾಗಿ ನೇ ಮಕ



ಮಾಡುವಂತೆ ನಾರಬಂಡಿ, ನವಲಕಲ್ ಮರಾಟ ಗ್ರಾಮಸ್ಥರು ತಹಸೀಲ್ದಾರ ಅಶೋಕ ಪವಾರ್ ಅವರಿಗೆ ಮನವಿ ಪತ್ರ ನೀಡುವ ಮೂಲಕ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಅಮರೇಗೌಡ ಯಲ್ಲಪ್ಪ, ಶಿವರಾಜ,ರಂಗನಾಥ, ಮೃತುಂಜ ಯ್ಯ,ಚನ್ನಪ್ಪ,ಸಿದ್ದಪ್ಪ, ಹುಸೇಪ್ಪ, ಅಗಸಿ ಮ ಲ್ಲಪ್ಪ, ಶಿವಪ್ಪ, ವೆಂಕಟೇಶ, ಅಮರೇಶ ಪವಾರ ಸೋಮಣ್ಣ, ಶರಣಪ್ಪ, ಭಿಮೇಶ, ಯಲ್ಲನಗೌಡ, ಯಲ್ಲಪ್ಪ ನಾಯಕ ಸೇರಿದಂತೆ ಇನ್ನು ಅನೇಕರು ಇದ್ದರು.

# ತಾಲೂಕ ಖಾಸಗಿ ಕಾರು ಚಾಲಕರ ಸಂಘದ ಅಧ್ಯಕ್ಷರಾಗಿ ವೆಂಕಟೇಶನಾಯಕ ಜಲ್ಲೆ ಆಯ್ಕೆ



**ಯುವ ಮಾರ್ಗ ಸುದ್ದಿ**

**ಅರಕೇರಾ,ಜು.19–**ತಾಲೂಕು ಮಟ್ಟದ ಖಾಸಗಿ ಕಾರು ಚಾಲಕರ ಸಂಘಕ್ಕೆ ಹೊಸ ಪದಾಧಿಕಾರಿಗಳನ್ನು ಆಯ್ಕೆಗೆ ಸಭೆ ನಡೆಯಿತು. ಪಟ್ಟಣದಲ್ಲಿನ ಪ್ರವಾಸಿ ಮಂದಿರದ ಆವರಣದಲ್ಲಿ ಮಹಾಂತೇಶ ಪೂಜಾರಿ ಮತ್ತು ಹರ್ಷವರ್ದನ ದೊರೆ ಇವರ ಅಧ್ಯಕ್ಷತೆಯಲ್ಲಿ ಎಲ್ಲಾ ಕಾರು ಮಾಲಕರು ಹಾಗೂ ಚಾಲಕರು ಸೇರಿಕೊಂಡು ಎಲ್ಲರನ್ನು ಚರ್ಚಿಸಿ ಸರ್ವ ಸಮ್ಮತದಿಂದ ಹೊಸ ಪದಾಧಿಕಾರಿಗಳ ಆಯ್ಕೆಮಾಡಲು ತಿರ್ಮಾನಿಸಲಾಯಿತು.

ಆದರೆ ಅಧ್ಯಕ್ಷಸ್ಥಾನಕ್ಕೆ ಮಾತ್ರ ಎರಡು ಹೆಸರು ಪ್ರಸ್ತಾವನೆ ಬಂದಿದ್ದರಿಂದ ವೆಂಕಟೇಶನಾಯಕ ಜಲ್ಲೆ ಮತ್ತು ಮುಸ್ತಾಪ್ ಕರ್ನೂಲ್ ಅಧ್ಯಕ್ಷಸ್ಥಾನಕ್ಕೆ ಚುನಾವಣೆ ನಡೆಯಿತು.

ಚುನಾವಣೆಯಲ್ಲಿ ವೆಂಕಟೇಶನಾಯಕ ಜಲ್ಲೆ ಇವರಿಗೆ 25 ಜನ ಚಾಲಕರು ಮತದಾನ ಮಾಡುವ ಮೂಲಕ ಬಹುಮತ ದೊರೆಯಿತು. ಮುಸ್ತಾಫ್ ಕರ್ನೂಲ್ ಇವರಿಗೆ 19 ಮತಗಳು ಗಳಿಸಿದರು ಒಟ್ಟು 44ಜನ ಚಾಲಕರು ಮತದಾನದಲ್ಲಿ ಭಾಗವಹಿಸಿದ್ದರು.

ಅಧ್ಯಕ್ಷರಾಗಿ ವೆಂಕಟೇಶನಾಯಕ ಜಲ್ಲೆ ಆಯ್ಕೆಯಾದರು ಗೌರವಾಧ್ಯಕ್ಷರಾಗಿ ಮುಸ್ತಾಫ್ ಕರ್ನೂಲ್ ಇನ್ನೂಳಿದ ಪದಾಧಿಕಾರಿಗಳ ಆಯ್ಕೆಯನ್ನು ಅವಿರೊಧವಾಗಿ ಆಯ್ಕೆಮಾಡಲಾಯಿತು. ಉಪಾಧ್ಯಕ್ಷರಾಗಿ ಸಿದ್ದು ಭೂಮನಗುಂಡ ಪ್ರಧಾನ ಕಾರ್ಯದರ್ಶಿ ದೇವು ಮಲ್ಲಿನಾಯಕನದೊಡ್ಡಿ, ಕಾರ್ಯದರ್ಶಿ ಶಶಿ ಚಿಂತಲಕುಂಟಾ, ಖಜಾಂಜಿ ಕಿಶೋರ ವಾಚಾನಾಯ್ಕತಾಂಡ .ಸಂಘಟನಾ ಕಾರ್ಯದರ್ಶಿ ಲೋಕೇಶ ಪವಾರ ಮುಕ್ಕಲುಗುಡ್ಡ ಸಂಚಾಲಕರು.ರಾಜಪ್ಪ ಬಂಡೆಗುಡ್ಡ, ಕಾನೂನು ಸಲಹೆಗಾರರಾಗಿ ಈಶಪ್ಪ ಶಿವಂಗಿ ಪಾದಾಧಿಕಾರಿಗಳನ್ನು ನೇಮಕ ಮಾಡಲಾಯಿತು.ಈ ಸಂದರ್ಬದಲ್ಲಿ ಹಿರಿಯ ಚಾಲಕರುಗಳಾದ ವೆಂಕಟೇಶ ಕುಂಬಾರ, ರಾಮುಗುತ್ತೇದಾರ, ಜಾಕೀರಹುಸೇನ್, ಹುಸೇನ್, ವೆಂಟೇಶನಾಯಕ. ಮುಂತಾದವರು ಭಾಗವಹಿಸಿದ್ದರು.

ಮಹಾಂತೇಶ ಪೂಜಾರಿ ಮಾತನಾಡಿ, ಚಾಲಕರು ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನಹರಿಸಬೇಕು. ಹಾಗೂ ಸರಕಾರದಿಂದ ಸಿಗುವ ಸೌಲಭ್ಯಗಳನ್ನು ಖಾಸಗಿ ವಾಹನ ಚಾಲಕರು ಪಡೆದುಕೊಳ್ಳಬೇಕು ಆರ್ಥಿಕವಾಗಿ ಮೂಂದೆ ಬರಬೇಕು ಮತ್ತು ನಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಿ ವಿದ್ಯಾವಂತರನ್ನಾಗಿ ಮಾಡಿರಿ ಎಂದರು.

ರೈತ ಸಂಘದ ತಾಲೂಕ ಅಧ್ಯಕ್ಷರು, ಹರ್ಷವರ್ದನ ನಾಯಕ ದೊರೆ ರಾಜ್ಯ ಸರಕಾರ ಜಾರಿಗೊಳಿಸಿರುವ ಮಹಿಳೆಯರ ಉಚಿತ ಪ್ರಯಾಣದ ಶಕ್ತಿ ಯೋಜನೆಯಿಂದ ಖಾಸಗಿ ಕಾರು ಮಾಲಿಕರು ಚಾಲಕರು ಎದುರಿಸುತ್ತಿರುವ ಸಂಕಷ್ಟಗಳು ಹಾಗೂ ನಷ್ಟದಿಂದ ಜೀವನ ನಿರ್ವಹಣೆ ,ಮಕ್ಕಳ ಶಿಕ್ಷಣ,ಆರೋಗ್ಯ, ಕುಟುಂಬ ಬಹಳಷ್ಟು ತೊಂದರೆಯನ್ನು ಅನುಭವಿಸಿತ್ತಾರೆ ಖಾಸಗಿ ಚಾಲಕರು ಎಂದು ಹೇಳಿದರು. ನೂತನ ವಾಗಿ ಆಯ್ಕೆಗೊಂಡ ಪದಾಧಿಕಾರಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

# ಸಿಂಧನೂರಲ್ಲಿ ಹೊಟೆಲ್ ಮಾಲೀಕರ ವಿರುದ್ಧ ಪ್ರಕರಣ ದಾಖಲು

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.19–**ಜಿಲ್ಲಾ ಮಕ್ಕಳ ಸಹಾಯವಾಣಿಗೆ ಬಂದ ದೂರಿನನನ್ವಯ ಜುಲೈ 18ರಂದು ಜಿಲ್ಲೆಯ ಸಿಂಧನೂರು ನಗರದ ಸಹನಾ ಆಸ್ಪತ್ರೆ ಎದುರುಗಡೆ ಇರುವ ಹೋಟೆಲ್ ಮೇಲೆ ಹಠಾತ್ ದಾಳಿ ನಡೆಸಿ ಬಾಲಕಾರ್ಮಿಕನನ್ನು ಕೆಲಸದಿಂದ ಬಿಡುಗಡೆಗೊಳಿಸಿ ಹೊಟೆಲ್ ಮಾಲೀಕರ ವಿರುದ್ಧ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016ರಡಿ ಸಿಂಧನೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಬಾಲಕಾರ್ಮಿಕನ್ನು ಕೆಲಸದಿಂದ ಬಿಡುಗಡೆಗೊಳಿಸಿ 8ನೇ ತರಗತಿಗೆ ದಾಖಲು ಮಾಡಿ ಮಗುವನ್ನು ಪಾಲಕರ ವಶಕ್ಕೆ ಒಪ್ಪಿಸಲಾಗಿದೆ. ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥರೆಡ್ಡಿ, ಸಿಂಧನೂರು ಕಾರ್ಮಿಕ ನಿರೀಕ್ಷಕರಾದ ವಿಜಯಲಕ್ಷ್ಮೀ, ಸಿಂಧನೂರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಿಆರ್‌ಪಿ ಚನ್ನವೀರಗೌಡ ಅವರು ಕಾರ್ಯಾಚರಣೆಯಲ್ಲಿದ್ದರು.

**ಸಾರ್ವಜನಿಕರಲ್ಲಿ ಮನವಿ:** ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 2016 ರಂತೆ 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಒಂದು ವೇಳೆ ದುಡಿಸಿಕೊಂಡಲ್ಲಿ 50,000 ರೂ.ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ಇರುತ್ತದೆ. ವಾಹನಗಳಲ್ಲಿ ಮಕ್ಕಳನ್ನು ಕೃಷಿ ಚಟುವಟಿಕೆಗಳಿಗಾಗಿ ಅಕ್ರಮ ಮತ್ತು ಕಾನೂನುಬಾಹಿರವಾಗಿ ಸಾಗಾಣಿಕೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ದುಡಿಯುವ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ–1098 ಗೆ ಮಾಹಿತಿ ನೀಡಬಹುದಾಗಿದೆ ಎಂದು ಇದೆ ವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

# ಅನುದಾನವಿಲ್ಲವೆನ್ನುವ ಶಾಸಕರು ಕೆಎಂಇಆರ್ಸಿ ನಿಧಿಯ ಸದ್ಬಳಕೆ ಏಕೆ ಮಾಡುತ್ತಿಲ್ಲ

**ಬಳ್ಳಾರಿ,ಜು.19–** ಅನುದಾನ ಇಲ್ಲ ಎನ್ನುವ ಶಾಸಕರು, ಕೆಎಂ ಇ ಆರ್ ಸಿ ಅನುದಾನವನ್ನು ಏಕೆ ಸಮರ್ಪಕವಾಗಿ ಬಳಸಿಕೊಳ್ಳುತ್ತಿಲ್ಲ. ಕಮೀಷನ್ ಸಿಗುತ್ತಿಲ್ಲ ಎಂದು ಈ ಬಗ್ಗೆ ನಿರ್ಲಕ್ಷವಹಿಸಿದಂತೆ ಕಾಣುತ್ತಿದೆ. ಈ ನಿಧಿಯ 36 ಸಾವಿರ ಕೋಟಿ ರೂ ಬಳಕೆ ಸರಿಯಾದ ರೀತಿಯಲ್ಲಿ ಆಗಬೇಕು ಅದು ಬಿಟ್ಟು ಕೇವಲ ಕಾಂಕ್ರೀಟ್ ಕೆಲಸಗಳಿಗೆ ಯೋಜನೆ ರೂಪಿಸಿವುದು ಸರಿಯಲ್ಲ ಗಣಿ ಬಾಧಿತ ಪರಿಸರ ಮತ್ತು ಜನ ಬದುಕಿನ ಪುನಶ್ಚೇತನ ಸಮಿತಿಯ ಸಂಚಾಲಕ ದೀಪಕ್ ಸಿ.ಎಸ್ ಹೇಳಿದ್ದಾರೆ. ಅವರಿಂದು ನಗರದ ಪತ್ರಿಕಾ ಭವನದಲ್ಲಿ ಮಾಧ್ಯಮ ಗೋಷ್ಠಿ ನಡೆಸಿ ಮಾತನಾಡುತ್ತಿದ್ದರು. ಅಕ್ರಮ ಗಣಿಗಾರಿಕೆಯಿಂದ ಬಳ್ಳಾರಿ, ಚಿತ್ರದುರ್ಗ , ವಿಜಯನಗರ, ತುಮಕೂರು ಜಿಲ್ಲೆಗಳ ಗಣಿ ಬಾಧಿತ ಪ್ರದೇಶಗಳ ಪುನಶ್ಚೇತನ ಹಾಗೂ ಗಣಿ ಬಾಧಿತರ ಪುನರ್ವಸತಿಗಾಗಿ ಒತ್ತಾಯಿಸಿ, ಮುಂದಿನ ತಿಂಗಳು ಆ.16 ರಂದು ಬಳ್ಳಾರಿ ನಗರದಲ್ಲಿ ಗಣಿ ಬಾಧಿತ ಪ್ರದೇ ಶಗಳ ಜನರ ಬೃಹತ್ ಸಮಾವೇಶ ಹಮ್ಮಿಕೊಂಡಿದೆಂದರು. ಜನಾರ್ಧನರೆಡ್ಡಿ, ಸತೀಶ್ ಶೈಲ್ ಅಕ್ರಮ ಗಣಿಗಾರಿಕೆ ಸಾಗಾಣಿಕೆಯಲ್ಲಿ ತಪ್ಪಿತಸ್ಥರೆಂದು ನ್ಯಾಯಾಲಯ ಹೇಳಿದರೂ, ಮತ್ತೆ ತಡೆ ನೀಡಿದೆ. ಇಷ್ಟೇ ಆದರೆ ಸಾಲದು ತ್ವರಿತ ರೀತಿಯಲ್ಲಿ ಆಗಿ ಅವರಿಂದ ನಷ್ಟದ ಪ್ರಮಾಣವನ್ನು ಸಹ ವಸೂಲು ಮಾಡಬೇಕಿದೆಂದರು.ಕೆಆರ್ ಎಸ್ ಪಕ್ಷದ ಅಧ್ಯಕ್ಷ ರವಿ ಕೃಷ್ಣ ರೆಡ್ಡಿ ಮಾತನಾಡಿಗಣಿ ಬಾಧಿತ ಪ್ರದೇಶಗಳ ಪುನಶ್ಚೇತನ ಹಾಗೂ ಗಣಿ ಬಾಧಿತರ ಪುನರ್ವಸತಿಗಾಗಿ ಮೀಸಲಾಗಿಟ್ಟಿರುವ ಹಣವನ್ನು ಸದ್ವಿನಿಯೋಗ ಮಾಡಿಕೊಳ್ಳುವಲ್ಲಿ ರಾಜ್ಯ ಸರ್ಕಾರ, ಜನಪ್ರತಿನಿಧಿಗಳು ಸಂಪೂರ್ಣ ವಿಫಲರಾಗಿದ್ದಾರೆ. ಇಲ್ಲಿ ಲೂಟಿ ಹೊಡೆಯಲು ಆಗಲ್ಲ ಎಂವುದೇ ಈ ನಿರ್ಲಕ್ಷಕ್ಕೆ ಕಾರಣವಾಗಿದೆಂದರು.ಆ.16 ರಂದು ಬಳ್ಳಾರಿಯಲ್ಲಿ ನಡೆಯುವ ಸಮಾವೇಶದಲ್ಲಿ ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಭಾಗವಹಿಸಲಿದ್ದಾರೆಂದರು.ಧರ್ಮಸ್ಥಳ ಪ್ರದೇಶದಲ್ಲಿ ನಡೆದ ಅಸಹಜ ಸಾವುಗಳ ತನಿಖೆ ಅಗತ್ಯ ಇದೆ. ಧರ್ಮಸ್ಥಳದ ಆಡಳಿತಾಧಿಕಾರಿಗಳ ಮೇಲೆ ಆರೋಪ ಕಂಡು ಬರುತ್ತಿದೆ. ಸೌಜನ್ಯಳ ಹತ್ಯೆ ವಿಚಾರ ಬಹಿರಂಗವಾದ ಮೇಲೆ ಏಕೆ ಅಸಹಜ ಸಾವುಗಳು ಆಗುತ್ತಿಲ್ಲ ಎಂದು ಪ್ರಶ್ನಿಸಿದ ಅವರು. ಸೌಜನ್ಯ ಪ್ರಕರಣವನ್ನು ಮರು ತನಿಖೆ ಆಗಬೇಕು ಎಂದರು. ಪೊಲೀಸ್ ವ್ಯವಸ್ಥೆಯ ಅಸಮರ್ಥತೆಯಿಂದ ಮಹಿಳೆಯರ ನಾಪತ್ತೆ, ಎಸ್ಸಿ.ಎಸ್ಟಿ ದೌರ್ಜನ್ಯಗಳು ನಿರಂತರವಾಗಿ ನಡೆಯುತ್ತಿದೆ. ಈ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ಅತೀ ಕಡಿಮೆ ಇದೆ. ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆ ತರುವ ಕೆಲಸ ಧರ್ಮಸ್ಥಳದ ಹೆಗ್ಗಡೆಯವರು ಮಾಡುತ್ತಿದ್ದಾರೆ. ವೀರೇಂದ್ರ ಹೆಗ್ಗಡೆಯವರು ತನಿಖೆ ಪೂರ್ಣ ಆಗುವವರೆಗೆ ರಾಜ್ಯ ಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕೆಂದರು.ಲೋಕಾಯುಕ್ತವನ್ನು ನಾಶಮಾಡಲು ಹೊರಟಿದ್ದ ಸಿದ್ದರಾಮಯ್ಯ ಈ ವಿಷಯದಲ್ಲಿ ಎಸ್ ಐಟಿ ಅವಶ್ಯಕತೆ ಇಲ್ಲ ಎಂದಿದ್ದಾರೆ. ಇದರ ವಿರುದ್ದ ರಾಜ್ಯಾದ್ಯಂತ ಹೋರಾಟ ಮಾಡಲಿದೆಂದರು. ಸುದ್ದಿಗೋಷ್ಠಿಯಲ್ಲಿ ಪಕ್ಷದ ಮುಖಂಡರುಗಳಾದ ಅಲ್ಲಿಪುರ ಶ್ರೀನಿವಾಸ್ ರೆಡ್ಡಿ, ಸಂತೋಷ್ ಕುಮಾರ್ಯುಗಂಧರ್, ಚಂದ್ರಶೇಖರ ದೊಡ್ಡಮನಿ ಮೊದಲಾದವರು ಇದ್ದರು.



# ತೆಲುಗು ಚಿತ್ರರಂಗದ ಹಾಸ್ಯ ನಟ ಫಿಶ್ ವೆಂಕಟ್ ವಿಧಿವಶ



**ಹೈದರಾಬಾದ್, ಜು.19–** ತೆಲುಗು ಚಿತ್ರರಂಗದ ಹಾಸ್ಯ ನಟ ಫಿಶ್ ವೆಂಕಟ್ ಅವರು ಮೂತ್ರಪಿಂಡದ ತೊಂದರೆಯಿಂದ ಇಹ ಲೋಕ ತ್ಯಜಿಸಿದ್ದಾರೆ.ಅನಾರೋಗ್ಯದಿಂದ ನರಳುತ್ತಿದ್ದ ಅವರಿಗೆ ಪವನ್ ಕಲ್ಯಾಣ್ ಆರ್ಥಿಕ ನೆರವು ನೀಡಿದ್ದರೂ ಹಣಕಾಸಿನ ತೊಂದರೆಯಿಂದ ಸೂಕ್ತ ಚಿಕಿತ್ಸೆ ಪಡೆಯಲು ಸಾಧ್ಯವಾಗದೆ ಅವರು ಕೊನೆಯುಸಿರೆಳೆದಿದ್ದಾರೆ.

ತೆಲುಗು ಸಿನಿಮಾಗಳಲ್ಲಿ ವಿಲನ್ ಪಾತ್ರ ಮಾಡಿ ಗಮನ ಸೆಳೆದಿದ್ದ ಫಿಶ್ ವೆಂಕಟ್ ಅವರಿಗೆ 54 ವರ್ಷ ವಯಸ್ಸಾಗಿತ್ತು. ಕೆಲವು ಸಮಯದಿಂದ ಮೂತ್ರಪಿಂಡ ಸಂಬಂಧಿತ ಕಾಯಿಲೆಯಿಂದ ಬಳಲುತ್ತಿದ್ದ ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಕೊನೆಯುಸಿರೆಳೆದರು. ಅವರ ಎರಡೂ ಮೂತ್ರಪಿಂಡಗಳು ಹಾನಿಗೊಳಗಾಗಿದ್ದರಿಂದ, ಅವರ ಕುಟುಂಬ ಸದಸ್ಯರು ಕೆಲವು ದಿನಗಳ ಹಿಂದೆ ಡಯಾಲಿಸಿಸ್ ಗಾಗಿ ಬೋಡುಪ್ಪಲ್‌ನ ಆಸ್ಪತ್ರೆಗೆ ದಾಖಲಿಸಿದ್ದರು.

ವೈದ್ಯರು ಎರಡೂ ಮೂತ್ರಪಿಂಡಗಳನ್ನು ಕಸಿ ಮಾಡಲು ಹೇಳಿದ್ದರು. ಅವರ ಆರ್ಥಿಕವಾಗಿ ಸಬಲರಾಗಿಲ್ಲ. ಹೀಗಾಗಿ, ವೈದ್ಯಕೀಯ ಸೇವೆಗಳನ್ನು ಪಡೆಯಲು ಸಾಧ್ಯವಾಗಿಲ್ಲ. ದಾನಿಗಳಿಂದ ಸಹಾಯಕ್ಕಾಗಿ ಮನವಿ ಮಾಡಿದ ಕೆಲವೇ ದಿನಗಳಲ್ಲಿ ಫಿಶ್ ವೆಂಕಟ್ ಸಾವನ್ನಪ್ಪಿದ್ದರಿಂದ ಕುಟುಂಬ ಸದಸ್ಯರು ಕಣ್ಣೀರು ಹಾಕುತ್ತಿದ್ದಾರೆ.

ಪವನ್ ಕಲ್ಯಾಣ್ ಅವರು ಈ ಮೊದಲು ನಟನಿಗೆ ಸಹಾಯ ಮಾಡಿದ್ದರು.ಫಿಶ್ ವೆಂಕಟ್ ಅವರ ನಿಜವಾದ ಹೆಸರು ಮಂಗಳಂಪಲ್ಲಿ ವೆಂಕಟೇಶ್.ಮುಶೀರಾಬಾದ್ ಮಾರುಕಟ್ಟೆಯಲ್ಲಿ ಮೀನು ವ್ಯಾಪಾರ ಮಾಡುವ ಮೂಲಕ ಅವರು ಫಿಶ್ ವೆಂಕಟ್ ಎಂದು ಗುರುತಿಸಿಕೊಂಡಿದ್ದರು. ಅವರು ಮುಶೀರಾಬಾದ್‌ನಲ್ಲಿ ವಾಸಿಸುತ್ತಿದ್ದರು. ನಟ ಶ್ರೀಹರಿ ಮೂಲಕ ಚಿತ್ರರಂಗಕ್ಕೆ ಪ್ರವೇಶಿಸಿದರು. ನಿರ್ದೇಶಕ ವಿ.ವಿ. ವಿನಾಯಕ್ ಅವರನ್ನು ನಟನಾಗಿ ಪರಿಚಯಿಸಿದರು.

ಫಿಶ್ ವೆಂಕಟ್ ನೂರಕ್ಕೂ ಹೆಚ್ಚು ಚಿತ್ರಗಳಲ್ಲಿ ಹಾಸ್ಯನಟ ಮತ್ತು ಪಾತ್ರ ಕಲಾವಿದನಾಗಿ ಚಲನಚಿತ್ರ ಪ್ರಿಯರನ್ನು ರಂಜಿಸಿದ್ದಾರೆ. ಅವರು ಆದಿ, ದಿಲ್, ಬನ್ನಿ, ಅತ್ತಾರಿಂಟಿಕಿ ದಾರೇದಿ, ಡಿಜೆ ಟಿಲ್ಲು ಮುಂತಾದ ಅನೇಕ ಹಿಟ್ ಚಿತ್ರಗಳಲ್ಲಿ ನಟಿಸಿ ಉತ್ತಮ ಮನ್ನಣೆ ಗಳಿಸಿದ್ದಾರೆ. ಅವರು ಎರಡು ತಮಿಳು ಸಿನಿಮಾ ಮಾಡಿದ್ದಾರೆ. ಕನ್ನಡದಲ್ಲಿ ಯಾವುದೇ ಸಿನಿಮಾ ಮಾಡಿಲ್ಲ.

# ತವರಲ್ಲಿ ಸಿಎಂ ಬಲ ಪ್ರದರ್ಶನ



**ಮೈಸೂರು,ಜು.19–**ರಾಜ್ಯದಲ್ಲಿ ಸೆಪ್ಟೆಂಬರ್‌ನಲ್ಲಿ ರಾಜಕೀಯ ಕ್ರಾಂತಿಯಾಗಲಿದೆ. ನಾಯಕತ್ವ ಬದಲಾವಣೆಯಾಗುತ್ತದೆಯೇ ಎಂಬೆಲ್ಲ ಗುಸುಗುಸುಗಳಿಗೆ ಅಂತ್ಯ ಹಾಡಿ ನಾನೇ ಮುಂದಿನ 5 ವರ್ಷ ಮುಖ್ಯಮಂತ್ರಿ ಎಂದು ಗುಡುಗಿದ್ದ ಸಿದ್ದರಾಮಯ್ಯ ಅವರು, ತಮ್ಮ ತವರು ಜಿಲ್ಲೆ ಮೈಸೂರಿನಲ್ಲಿಂದು ನಡೆದ ಸರ್ಕಾರದ ಸಾಧನಾ ಸಮಾವೇಶ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜನಶಕ್ತಿಯನ್ನು ಸಂಕೇತಿಸಿತು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಇಂದು ನಡೆದ ಸಾಧನಾ ಸಮಾವೇಶ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಶಕ್ತಿ ಪ್ರದರ್ಶನ ಎಂದೇ ವ್ಯಾಖ್ಯಾನಿಸಲಾಗಿದ್ದು, ತವರು ಜಿಲ್ಲೆ ಮೈಸೂರಿನಲ್ಲಿ ಲಕ್ಷಾಂತರ ಅಭಿಮಾನಿಗಳು ಹಾಗೂ ಕಾರ್ಯಕರ್ತರ ಪಡೆಯೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ವಿರೋಧಿಗಳಿಗೆ ಶಕ್ತಿ ಪ್ರದರ್ಶನದ ಮೂಲಕ ದೊಡ್ಡ ರಾಜಕೀಯ ಸಂದೇಶವನ್ನು ರವಾನಿಸಿದ್ದಾರೆ ಎಂದು ವಿಶ್ಲೇಷಿಸಲಾಗುತ್ತದೆ..

ಸಾಂಸ್ಕೃತಿಕ ನಗರಿಯಲ್ಲಿ ಅಭಿವೃದ್ಧಿ ಪರ್ವ ಘೋಷಣೆಯಡಿ ನಡೆದ ಈ ಸಾಧನಾ ಸಮಾವೇಶಕ್ಕೆ ಸಾವಿರಾರು ಜನ ಸೇರಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಎಲ್ಲರ ಸಮ್ಮುಖದಲ್ಲೇ ತಮಗಿರುವ ಜನ ಬಲವನ್ನು ಪ್ರದರ್ಶಿಸಿರುವುದು ನಿಜ.ರಾಜ್ಯದಲ್ಲಿ ಮುಂದಿನ ದಿನಗಳಲ್ಲಿ ಅಧಿಕಾರ ಹಂಚಿಕೆಯಾಗಲಿದೆ. ನಾಯಕತ್ವ ಬದಲಾಗಲಿದೆ ಎಂಬ ಸುದ್ದಿಗಳ ನಡುವೆಯೇ ಮೈಸೂರಿನಲ್ಲಿಂದು ನಡೆದ ಈ ಸಮಾವೇಶ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ. ಈ ಸಮಾವೇಶದ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಡೆಸಿರುವ ಶಕ್ತಿ ಪ್ರದರ್ಶನದ ಹಿಂದೆ ರಾಜಕೀಯ ಲಾಭದ ಲೆಕ್ಕಾಚಾರಗಳು ಇವೆ ಎಂದು ಹೇಳಲಾಗಿದೆ.

ಎರಡು ವರ್ಷಗಳ ಹಿಂದೆ ಅಧಿಕಾರ ವಹಿಸಿಕೊಂಡು ಗ್ಯಾರಂಟಿ ಯೋಜನೆಯನ್ನು ಅನುಷ್ಠಾನಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಅಭಿವೃದ್ಧಿ ಕಾರ್ಯಗಳಿಗೆ ಹಣ ಕೊಟ್ಟಿಲ್ಲ ಎಂದು ಸ್ವಪಕ್ಷೀಯ ಶಾಸಕರೇ ಅಸಮಾಧಾನ ಹೊರಹಾಕಿದೆ ಬೆನ್ನಲ್ಲೆ ಶಾಸಕರಿಗೆ ತಲಾ 50 ಕೋಟಿ ಅನುದಾನ ಬಿಡುಗಡೆ ಮಾಡಿ ಶಾಸಕರ ಅಸಮಾಧಾನ ತಣಿಸುವ ಪ್ರಯತ್ನ ನಡೆಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಸಮಾವೇಶದ ಮೂಲಕ ಶಾಸಕರ ಜತೆಗೆ ಜನರ ಬೆಂಬಲವೂ ತಮಗಿದೆ ಎಂಬ ಬಲವಾದ ಸಂದೇಶವನ್ನು ರವಾನಿಸಿದ್ದಾರೆ ಎಂದೇ ಹೇಳಲಾಗಿದೆ.

ಮೈಸೂರಿನ ಸಮಾವೇಶ ಯಾರ ಶಕ್ತಿ ಪ್ರದರ್ಶನವೂ ಅಲ್ಲ. ಪಕ್ಷದ ಸಮಾವೇಶ,ಸರ್ಕಾರದ ಜನಪರ ಕೆಲಸಗಳನ್ನು ಜನರ ಮುಂದಿಡುವ ಸಮಾವೇಶ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದರೂ ಈ ಸಮಾವೇಶ ವೈಯಕ್ತಿಕವಾಗಿ ಮುಖ್ಯಮಂತ್ರಿಗಳ ಶಕ್ತಿ ಪ್ರದರ್ಶನದ ಸಮಾವೇಶ ಎಂದೇ ರಾಜಕೀಯ ವಲಯದಲ್ಲಿ ವಿಶ್ಲೇಷಿಸಲಾಗುತ್ತಿದೆ.

ಈ ಹಿಂದೆ ಮುಡಾ ಹಗರಣದ ಆರೋಪ ಎದುರಾದಾಗಲೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ಸಮಾವೇಶ ನಡೆಸಿ ತಮ್ಮ ಶಕ್ತಿ ಪ್ರದರ್ಶಿಸಿದರು. ಈಗಲೂ ನಾಯಕತ್ವವನ್ನೇ ಪ್ರಶ್ನಿಸುವ ಪ್ರಯತ್ನಗಳು ನಡೆದಿರುವಾಗಲೇ ಮೈಸೂರಿನಲ್ಲಿ ಸಮಾವೇಶ ನಡೆಸಿ ತಮ್ಮ ಬಲ ತೋರಿಸಿದ್ದಾರೆ.ಮೈಸೂರಿನ ಈ ಸಮಾವೇಶಕ್ಕೆ ದೊಡ್ಡ ಜನಸಾಗರವೇ ಹರಿದು ಬಂದಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತಷ್ಟು ಬಲ ತಂದುಕೊಟ್ಟಿದೆ. ಈ ಸಮಾವೇಶದ ಸಂದರ್ಭದಲ್ಲೇ ಮೈಸೂರು ಜಿಲ್ಲೆಯ ಅಭಿವೃದ್ಧಿಗೆ 2,297 ಕೋಟಿ ರೂ. ಮೊತ್ತದ 56 ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಸುಮಾರು 280 ಕೋಟಿ ರೂ.ಮೊತ್ತದ 18 ಕಾಮಗಾರಿಗಳನ್ನು ಉದ್ಘಾಟಿಸಲಾಯಿತು.

# ಬೊಕ್ಕಸ ಭರ್ತಿಗೆ ಬೀದಿ ವ್ಯಾಪಾರಗಳಿಗೆ ನೋಟಿಸ್



**ಕಲಬುರಗಿ,ಜು.19–** ಕಾಂಗ್ರೆಸ್ ಸರ್ಕಾರವು ಗ್ಯಾರಂಟಿಗಳಿಗೆ ಹಣ ಕ್ರೂಢೀಕರಿಸಲು ಸಾಧ್ಯವಾಗದೆ ಸಣ್ಣ ವ್ಯಾಪಾರಿಗಳು ಹಾಗೂ ಬೀದಿ ಬದಿ ವ್ಯಾಪಾರಿಗಳಿಗೆ ನೋಟಿಸ್ ನೀಡಿ ಹೆದರಿಸುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹೇಳಿದರು.

ಕಲಬುರಗಿಯಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಯಾವುದೇ ರಾಜ್ಯದಲ್ಲಿ ಈ ರೀತಿಯ ಬೆಳವಣಿಗೆಯಾಗಿಲ್ಲ.ಆದರೆ, ಕರ್ನಾಟಕದಲ್ಲಿ ಗ್ಯಾರಂಟಿಗಳಿಗೆ ಹಣ ಕ್ರೂಢೀಕರಿಸಲು ಸಾಧ್ಯವಾಗುತ್ತಿಲ್ಲ. ಅಭಿವೃದ್ಧಿಗೆ ಹಣ ಹೊಂದಿಸಲು ಸಾಧ್ಯವಾಗದೆ ಮುಖ್ಯಮಂತ್ರಿಗಳ ಆದೇಶದ ಮೇರೆಗೆ ಸಣ್ಣ ಸಣ್ಣ ವ್ಯಾಪಾರಿಗಳು,ಬೀದಿ ಬದಿ ವ್ಯಾಪಾರಿಗಳನ್ನು ಹೆದರಿಸುವ ಕೆಲಸವನ್ನು ರಾಜ್ಯಸರ್ಕಾರ ಮಾಡುತ್ತಿದೆ ಎಂದು ದೂರಿದರು.

ಸಣ್ಣ ವ್ಯಾಪಾರಿಗಳಿಗೆ ತೆರಿಗೆ ಪಾವತಿ ಬಗ್ಗೆ ರಾಜ್ಯಸರ್ಕಾರ ನೋಟಿಸ್ ನೀಡಿರುವ ಬಗ್ಗೆ ನಮ್ಮ ಪಕ್ಷದ ಮುಖಂಡರು ಚರ್ಚೆ ಮಾಡಿದ್ದೇವೆ. ಹಣ ಇಲ್ಲದೆ ರಾಜ್ಯಸರ್ಕಾರ ಬೀದಿ ಬದಿ ವ್ಯಾಪಾರಿಗಳಿಗೆ ನೋಟಿಸ್ ನೀಡಿ ಬೆದರಿಸುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.ದೇಶದ ಯಾವುದೇ ರಾಜ್ಯದಲ್ಲೂ ಈ ರೀತಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ನೋಟಿಸ್ ನೀಡಿಲ್ಲ ಎಂದರು.

ತಮ್ಮ ಕುರ್ಚಿಗೆ ಸಂಕಷ್ಟ ಬಂದಾಗಲೆಲ್ಲ ಸಿದ್ದರಾಮಯ್ಯ ಅವರು ಸಮಾವೇಶ ನಡೆಸುವ ತಂತ್ರ ನಡೆಸುತ್ತಾರೆ. ಸಮಾವೇಶ ಎಂದರೆ ಸಿದ್ದರಾಮಯ್ಯ, ಸಿದ್ದರಾಮಯ್ಯ ಎಂದರೆ ಸಮಾವೇಶ ಎಂದು ಟೀಕಿಸಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಅಹಿಂದಾ ಸಮುದಾಯಗಳನ್ನು ಮುಂದಿಟ್ಟುಕೊಂಡುರಾಜಕೀಯ ಬೇಳೆಬೇಯಿಸಿಕೊಳ್ಳಲು ಸಮಾವೇಶ ನಡೆಸುತ್ತಾರೆ ಎಂದು ಮೈಸೂರಿನಲ್ಲಿ ನಡೆದಿರುವ ಸಾಧನಾ ಸಮಾವೇಶದಲ್ಲಿ ಪ್ರತಿಕ್ರಿಯಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಧನೆ ಮಾಡಿದ್ದರೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರು ಪದೇ ಪದೇ ಬೆಂಗಳೂರಿಗೆ ಬಂದು ಶಾಸಕರನ್ನು ಸಮಾಧಾನಪಡಿಸುವ ಪರಿಸ್ಥಿತಿಯೇ ಉದ್ಭವವಾಗುತ್ತಿರಲಿಲ್ಲ ಎಂದರು.

ಮುಖ್ಯಮಂತ್ರಿ ಬದಲಾವಣೆ ಮಾಡುವುದಾದರೆ ಯಾರನ್ನು ಮಾಡಬೇಕೆಂದು ಶಾಸಕರ ಮನದಾಳವನ್ನು ತಿಳಿಯಲು ಸುರ್ಜೇವಾಲಾ ಪದೇ ಪದೇ ರಾಜ್ಯಕ್ಕೆ ಬರುತ್ತಿದ್ದಾರೆ ಎಂದು ಹೇಳಿದರು.

ಮುಖ್ಯಮಂತ್ರಿ ಸ್ಥಾನಕ್ಕಾಗಿ ಕಾಂಗ್ರೆಸ್‌ನಲ್ಲಿ ಕುದುರೆ ವ್ಯಾಪಾರ ಪೈಪೋಟಿ ನಡೆಯುತ್ತಿದೆ. ಇದನ್ನು ಅರಿತಿರುವ ಸಿದ್ದರಾಮಯ್ಯ ಅವರು ಸಮಾವೇಶ ಮಾಡುವ ಮೂಲಕ ಕಾಂಗ್ರೆಸ್ ಹೈಕಮಾಂಡ್‌ನ್ನು ಬೆದರಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.

ಕಾಂಗ್ರೆಸ್ ಪಕ್ಷವು ನಿರಂತರವಾಗಿ ಬಿಜೆಪಿ ಶಾಸಕರನ್ನು ಬೆದರಿಸುವ ಕುತಂತ್ರ ನಡೆಸುತ್ತಿದೆ. ಬೆಂಗಳೂರಿನಲ್ಲಿ ರೌಡಿಶೀಟರ್ ಕೊಲೆ ಪ್ರಕರಣದಲ್ಲಿಶಾಸಕ ಬೈರತಿ ಬಸವರಾಜು ವಿರುದ್ಧ ಎಫ್‌ಐಆರ್ ಮಾಡಿ ಅವರನ್ನು ರಾಜಕೀಯ ಮುಗಿಸುವ ಷಡ್ಯಂತ್ರ ನಡೆಸಿದೆ. ದಕ್ಷಿಣ ಕನ್ನಡದಲ್ಲೂ ಶಾಸಕಹರೀಶ್ ಪೂಂಜಾ, ಭರತ್‌ಶೆಟ್ಟಿ ಅವರ ಮೇಲು ಎಫ್‌ಐಆರ್ ದಾಖಲಾಗಿತ್ತು. ಅವರನ್ನು ಬಂಧಿಸುವ ಪ್ರಯತ್ನ ಸಫಲವಾಗಲಿಲ್ಲ ಎಂದು ಹೇಳಿದರು.

ಶಾಸಕರಿಗೆ ಅನುದಾನ ಬಿಡುಗಡೆಮಾಡಿರುವುದು ಕಪಟ ನಾಟಕ, ಕುರ್ಚಿ ಉಳಿಸಿಕೊಳ್ಳಲು ಮುಖ್ಯಮಂತ್ರಿ ಈ ರೀತಿ ಮಾಡಿದ್ದಾರೆ. 50 ಕೋಟಿ ಬಿಡುಗಡೆಗೆ ಸಿಎಂ ಪತ್ರ ಬರೆದಿದ್ದಾರೆ. ಯಾವಾಗ ಹಣ ಬಿಡುಗಡೆಯಾಗಲಿದೆ. ಯಾವಾಗ ಶಾಸಕರ ಕೈ ಸೇರಲಿದೆ. ಅಭಿವೃದ್ಧಿ ಕೆಲಸ ಆಗುವುದು ಯಾವಾಗ ಇವೆಲ್ಲವೂ ಯಕ್ಷ ಪ್ರಶ್ನೆಗಳಾಗಿ ಉಳಿದಿವೆ ಎಂದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಎತ್ತಿದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎಲ್ಲಿಲ್ಲದ ಕೋಪ ಬರುತ್ತದೆ ಎಂದು ಬಿಜೆಪಿ ರಾಜ್ಯ ಸರ್ಕಾರ ಗಂಭೀರ ಆರೋಪ ಮಾಡಿದರು.

ಎಐಸಿಸಿ ಅಧ್ಯಕ್ಷ ಖರ್ಗೆಯವರು ರಾಜ್ಯ ರಾಜಕಾರಣಕ್ಕೆ ಹಿಂದಿರುಗಲಿದ್ದಾರೆ ಎಂಬ ವದಂತಿಗಳ ಕುರಿತು ಕೇಳಲಾದ ಪ್ರಶ್ನೆಗೆ ಹೀಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, ಈ ಹಿಂದೆ ಸಿದ್ದರಾಮಯ್ಯ ಅವರು ಜಿ ಪರಮೇಶ್ವರ್ ಅವರಿಗೆ ಹೇಗೆ ಅನ್ಯಾಯ ಮಾಡಿದರು ಎಂಬ ಚರ್ಚೆ ನಡೆದಿತ್ತು. ಇದೀಗ ಖರ್ಗೆ ಅವರ ವಿಷಯದಲ್ಲಿಯೂ ಸಿದ್ದರಾಮಯ್ಯ ಇದೇ ತಂತ್ರ ಅನುಸರಿಸುತ್ತಿದ್ದಾರೆ ಎಂದರು.

ಬಿಜೆಪಿ ಶಾಸಕ ಭೈರತಿ ಬಸವರಾಜ ಅವರನ್ನು ರಾಜಕೀಯವಾಗಿ ಮುಗಿಸಲು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಷಡ್ಯಂತರ ರೂಪಿಸಿದೆ. ಇದು ಹೊಸತೇನೂ ಅಲ್ಲ. ಕಳೆದ ಎರಡು ವರ್ಷಗಳಿಂದ ಬಿಜೆಪಿ ಶಾಸಕರನ್ನು ಬೆದರಿಸುವ ಕೆಲಸ ನಡೆಯುತ್ತಲೇ ಬಂದಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಿಜಯೇಂದ್ರ ಕೆಂಡಕಾರಿದರು.

# ಕೈ ಶಾಸಕರಿಗೆ ಅನುದಾನ: ಮಲತಾಯಿ ಧೋರಣೆ ; ಅಶೋಕ್ ಟೀಕೆ



**ಬೆಂಗಳೂರು,ಜು.19–**ಕಾಂಗ್ರೆಸ್ ಶಾಸಕರ ಕ್ಷೇತ್ರಗಳಿಗೆ 50 ಕೋಟಿ ರೂ. ಅನುದಾನ ನೀಡಿ ವಿಪಕ್ಷ ಶಾಸಕರ ಕ್ಷೇತ್ರಗಳಿಗೆ ಅನುದಾನ ನೀಡದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ್ ಕಿಡಿಕಾರಿದ್ದು, ಮಾತ್ತೆತ್ತಿದರೆ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ತೋರುತ್ತಿದೆ ಎಂದು ಬೊಬ್ಬೆ ಹೊಡೆಯುತ್ತಿರಲ್ಲಾ. ನೀವು ಮಾಡಿರುವುದು ಮಲತಾಯಿ ಧೋರಣೆ ಅಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಕೂಡಲೇ ಎಲ್ಲ ಪಕ್ಷದ ಶಾಸಕರಿಗೂ ಅನುದಾನ ಕೊಡಿ. ಮಲತಾಯಿ ಧೋರಣೆ ನಿಲ್ಲಿಸಿ ಎಂದು ಅವರು ಆಗ್ರಹಿಸಿ ಸರ್ಕಾರಿ ಖಜಾನೆ ಕಾಂಗ್ರೆಸ್ ಪಕ್ಷದ ಫಂಡ್ ಅಲ್ಲ, ಜನರ ತೆರಿಗೆ ಹಣ, ಎಲ್ಲ ಶಾಸಕರಿಗೆ ತಾರತಮ್ಯ ಮಾಡಬೇಡಿ ಎಂದು ಅವರು ಹೇಳಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಬಗ್ಗೆ ಟ್ವೀಟ್ ಮಾಡಿರುವ ಆರ್. ಅಶೋಕ್, ಸೂಪರ್ ಸಿಎಂ ಸುರ್ಜೇವಾಲಾ ಅವರು ಶಾಸಕರೊಂದಿಗೆ ನಡೆಸಿದ ಸಭೆ ನಂತರ ಬಹಿರಂಗವಾಗಿರುವ ಅಸಮಾಧಾನಕ್ಕೆ ಬೆಚ್ಚಿ ಬಿದ್ದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕುರ್ಚಿ ಉಳಿಸಿಕೊಳ್ಳಲು ಕಾಂಗ್ರೆಸ್ ಶಾಸಕರಿಗೆ ತಲಾ 50 ಕೋಟಿ ರೂ. ಅನುದಾನ ನೀಡಲು ಮುಂದಾಗಿದ್ದಾರೆ ಎಂದು ಟೀಕಿಸಿದ್ದಾರೆ.

ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿರುವವರು ಮಾತ್ರ ಕರ್ನಾಟಕದ ಪ್ರಜೆಗಳಾ ಕಾಂಗ್ರೆಸ್ ಶಾಸಕರನ್ನು ಗೆಲ್ಲಿಸಿರುವ ಕ್ಷೇತ್ರಗಳಿಗೆ ಮಾತ್ರ ತಾವು ಮುಖ್ಯಮಂತ್ರಿನಾ, ಕನ್ನಡಿಗರಿಗೆ ದ್ರೋಹ ಬಗೆಯುತ್ತಿರುವ ಲಜ್ಜೆ ಕೆಟ್ಟ ಕಾಂಗ್ರೆಸ್ ಪಕ್ಷಕ್ಕೆ ನಾಚಿಕೆಯಾಗಬೇಕು ಎಂದು ವಾಗ್ದಾಳಿ ನಡೆಸಿದ್ದಾರೆ.

ಸೂಪರ್ ಸಿಎಂ ಸುರ್ಜೇವಾಲಾ ಅವರೇ ಕಾಂಗ್ರೆಸ್ ಶಾಸಕರ ಕ್ಷೇತ್ರಗಳಿಗೆ ಅನುದಾನ ಕೊಡಿಸಿಕೊಟ್ಟ ತಮಗೆ ಅಭಿನಂದನೆಗಳು. ಬಿಜೆಪಿ–ಜೆಡಿಎಸ್ ಶಾಸಕರ ಕ್ಷೇತ್ರಗಳಿಗೂ ಅನುದಾನ ಕೊಡಿಸಿ ಪುಣ್ಯ ಕಟ್ಟಿಕೊಳ್ಳಿ ಸ್ವಾಮಿ. ನಿಮ್ಮ ಸೂಚನೆಯ ಫಲವಾಗಿ ನಮ್ಮ ಪಕ್ಷದ ಶಾಸಕರ ಕ್ಷೇತ್ರಗಳಿಗೂ ಅನುದಾನ ಸಿಕ್ಕರೆ ತಮಗೆ ವಿಶೇಷ ಸನ್ಮಾನ ಮಾಡಿ ಅಭಿನಂದಿಸುತ್ತೇವೆ. ನಮಗೂ ಅನುದಾನ ಕೊಡಿಸುತ್ತೀರಿ ಅಲ್ಲವೇ ಎಂದು ಅಶೋಕ್ ಟ್ವೀಟ್ ಮಾಡಿದ್ದಾರೆ.

ಕಳೆದ 26 ತಿಂಗಳಲ್ಲಿ ತಮ್ಮದೇ ಪಕ್ಷದ ಸರ್ಕಾರವಿದ್ದರೂ ನಯಾಪೈಸೆ ಅನುದಾನ ಪಡೆಯಲಾಗದೆ ಕ್ಷೇತ್ರಗಳಲ್ಲಿ ತಲೆ ಎತ್ತಿಕೊಂಡು ಓಡಾಡಲಾಗದ ಪರಿಸ್ಥಿತಿಯಲ್ಲಿದ್ದ ಕಾಂಗ್ರೆಸ್ ಶಾಸಕರು ಸೂಪರ್ ಸಿಎಂ ಸುರ್ಜೇವಾಲಾ ಅವರ ಸಭೆಯ ಪರಿಣಾಮದಿಂದ ಅನುದಾನ ಗಿಟ್ಟಿಸಿಕೊಂಡಿದ್ದಾರೆ ಎಂದು ಅಶೋಕ್ ವ್ಯಂಗ್ಯವಾಡಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಕ್ಷೇತ್ರದ ಅನುದಾನಕ್ಕೆ ವಿಪಕ್ಷಗಳ ಶಾಸಕರು ತಾಳ್ಮೆಯಿಂದ ಕಾಯಬೇಕು ಎಂದು ಹೇಳಿರುವುದಕ್ಕೆ ಅಸಮಾಧಾನ ಹೊರ ಹಾಕಿರುವ ಆರ್. ಅಶೋಕ್ ತಾಳ್ಮೆಯಿಂದ ಕಾಯಬೇಕು ಎಂದರೆ ಏನು ಶಿವಕುಮಾರ್ ಅವರೇ ತಾವು ಈ ಮೊದಲೇ ಹೇಳಿರುವಂತೆ ಶಾಸಕರು ತಮ್ಮ ಬಳಿ ತಗ್ಗಿ ಬಗ್ಗಿ ನಡೆಯಬೇಕು ಎಂಬ ಅರ್ಥನಾ ಅಥವಾ ತಾಳ್ಮೆಯಿಂದ ಇರದಿದ್ದರೆ ನಟ್ಟು –ಬೊಲ್ಟು ಟೈಟ್ ಮಾಡುತ್ತೇನೆ ಎಂಬ ಧಮ್ಕಿನಾ ಎಂದು ಲೇವಡಿ ಮಾಡಿದ್ದಾರೆ.

ನಿಮಗೆ ಇಷ್ಟ ಬಂದ ಹಾಗೆ ಬರೀ ಕಾಂಗ್ರೆಸ್ ಶಾಸಕರಿಗೆ ಮಾತ್ರ ಅನುದಾನ ಕೊಡುವುದಕ್ಕೆ ರಾಜ್ಯಸರ್ಕಾರದ ಖಜಾನೆ ಕಾಂಗ್ರೆಸ್ ಪಕ್ಷದ ಪಾರ್ಟಿ ಫಂಡ್ ಅಲ್ಲ. ಅದು ಆರೂವರೆ ಕೋಟಿ ಕನ್ನಡಿಗರ ಬೆವರಿನ ತೆರಿಗೆ ಹಣ. ಈ ಮಲತಯಿ ಧೋರಣೆ ನಿಲ್ಲಿಸಿ ಎಲ್ಲ ಕ್ಷೇತ್ರಗಳಿಗೂ ಅನುದಾನ ಕೊಡಿ ಎಂದು ಅಶೋಕ್ ಒತ್ತಾಯಿಸಿದ್ದಾರೆ.

# 7 ಕೋಟಿ ರೂ.ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಪಾಟೀಲ್ ಚಾಲನೆ



**ಕರಜಗಿ,ಜು.19–**ರಾಜ್ಯ ಕಾಂಗ್ರೇಸ್ ಸರ್ಕಾರ ರಾಜ್ಯದಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೆ ತಂದು ಎಲ್ಲ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡಿದೆ ಎಂದು ಶಾಸಕ ಎಂ.ವೈ.ಪಾಟೀಲ್ ಹೇಳಿದರು.

2024–25 ನೇ ಸಾಲಿನ ಕೆ.ಕೆ.ಆರ್.ಡಿ.ಬಿ ಮೈಕ್ರೋ ಯೋಜನೆ ಅಡಿಯಲ್ಲಿ ಸುಮಾರು 7 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಅಫಜಲಪುರ ತಾಲೂಕಿನ ಜೇವರಗಿ(ಬಿ) ಗ್ರಾಮದಿಂದ ಮಾಶಾಳ ಗ್ರಾಮ ಹಾಗೂ ರಾಮನಗರ ತಾಂಡಾದಿಂದ ರಾಜೀವನಗರ ತಾಂಡಾ ವರೆಗೆ ರಸ್ತೆ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು ಸಮಾರಂಭ ನೆರವೇರಿಸಿ ಮಾತನಾಡಿದ ಅವರು,ಗುಣಮಟ್ಟದ ರಸ್ತೆಗಳು ನಿರ್ಮಾಣವಾದಾಗ ಗ್ರಾಮೀಣ ಭಾಗದಲ್ಲಿ ಸಂಪರ್ಕ ಕ್ರಾಂತಿ ಹೆಚ್ಚುವುದಲ್ಲದೇ ರೈತರು ತಮ್ಮ ವ್ಯಾಪಾರ ವಹಿವಾಟು ಸರಕು ಸಾಗಾಟಗಳಿಗೆ ಅನುಕೂಲವಾಗಲಿದೆ.ಹೀಗಾಗಿ ಗುತ್ತಿಗೆದಾರರು ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ಮುಂದಾಗಬೇಕೆಂದು ಸೂಚನೆ ನೀಡಿದ ಅವರು ಈ ಕ್ಷೇತ್ರದ ಸಮಗ್ರ ಅಭಿವೃದ್ಧಿ ಕಾರ್ಯಗಳಿಗೆ ಒತ್ತು ನೀಡಲಾಗಿದ್ದು ಯಾವುದೇ ಅಭಿವೃದ್ಧಿ ಬೇಡಿಕೆಗಳು ಇದ್ದರೂ ಸಹ ಎಲ್ಲವನ್ನು ಹಂತ ಹಂತವಾಗಿ ಈಡೇರಿಸಲಾಗುವುದು.ಹೀಗಾಗಿ ಎಲ್ಲರ ಸಹಕಾರ ಇರಲಿ ಎಂದರು.

ಸಮಾರಂಭ ಉದ್ದೇಶಿಸಿ ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಉಪಾಧ್ಯಕ್ಷ ಜೆ.ಎಂ. ಕೊರಬು,ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಪ್ರಕಾಶ ಜಮಾದಾರ ಮಾತನಾಡಿದರು.ಕಾರ್ಯಕ್ರಮದ ಸಾನಿಧ್ಯವನ್ನು ಜೇವರ್ಗಿ ಶ್ರೀಗಳು ಪ್ರಮುಖರಾದ ಕೆಪಿಸಿಸಿ ಸದಸ್ಯ ಅರುಣಕುಮಾರ ಎಂ.ವೈ. ಪಾಟೀಲ್,ಗ್ರಾಪಂ ಅಧ್ಯಕ್ಷೆ ರಾಣುಬಾಯಿ ಚವ್ಹಾಣ,ಕವಿತಾ ರೇವೂರ,ಮುಖಂಡರಾದ ಸಿದ್ದಾರ್ಥ ಬಸರಿಗಿಡ,ಶಿವಾನಂದ ಗಾಡಿಸಾಹುಕಾರ,ಶರಣು ಕುಂಬಾರ,ಚಿಂಟು ಪಟೇಲ್, ಮಹೇಶ ಆಲೇಗಾಂವ, ರಾಜು ಬಬಲಾದ, ಶಿವಪುತ್ರಪ್ಪ ಜಿಡ್ಡಗಿ, ಬಿಸ್ಮಿಲ್ಲಾ ಪಟೇಲ್, ಅಭಿಷೇಕ ಪಾಟೀಲ್, ಲೋಕೋಪಯೋಗಿ ಎಇಇ ಲಕ್ಷ್ಮೀಕಾಂತ ಬಿರಾದಾರ, ಗುತ್ತಿಗೆದಾರ ವಿಜಯ ಸೇರಿದಂತೆ ಅನೇಕರಿದ್ದರು

# ಮಾಧ್ಯಮ ಅಕಾಡೆಮಿಯಿಂದ ಫೆಲೋಶಿಪ್‌ಗೆ ಅರ್ಜಿ ಆಹ್ವಾನ

**ರಾಯಚೂರು,ಜು.19–**ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ಪತ್ರಕರ್ತರಿಗೆ ಆರು ವಿಷಯಗಳ ಕುರಿತ ಫೆಲೋಷಿಪ್‌ಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಕಾಡೆಮಿಯ ಸಾಮಾನ್ಯ ಆಯವ್ಯಯದಡಿ ಎರಡು, ಮಹಿಳಾ ಆಯುವ್ಯಯುದಡಿ ಎರಡು ಹಾಗೂ ಪರಿಶಿಷ್ಟ ಜಾತಿ ಉಪಯೋಜನೆಯಡಿ ಒಂದು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ ಒಂದು ಫೆಲೋಷಿಪ್ ನೀಡಲಾಗುವುದು. ಫೆಲೋಷಿಪ್ ಅವಧಿ 6 ತಿಂಗಳು ಇರುತ್ತದೆ.

ಕನಿಷ್ಠ ಐದು ವರ್ಷ ಸೇವಾನುಭವ ಹೊಂದಿರುವ, ಕನಿಷ್ಠ 30 ವರ್ಷದಿಂದ 50 ವರ್ಷ ವಯೋಮಿತಿಯ ಪತ್ರಕರ್ತರು ಫೆಲೋಷಿಪ್‌ಗೆ ಅರ್ಜಿ ಸಲ್ಲಿಸಬಹುದು. ಪತ್ರಕರ್ತರು ಪದವೀಧರರಾಗಿರಬೇಕು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಹಾಗೂ ಉಪಗ್ರಹ ಸುದ್ದಿವಾಹಿನಿಗಳಲ್ಲಿ ಕಾರ್ಯನಿರ್ವಹಿಸುತ್ತಿರಬೇಕು. ಈ ಕುರಿತು ಸಂಪಾದಕರ ದೃಢೀಕರಣ ಪತ್ರ ಸಲ್ಲಿಸಬೇಕು.

ಫೆಲೋಷಿಪ್‌ನ ವಿಷಯಗಳು: ಬಾಲ್ಯವಿವಾಹ, ಪೋಸ್ಕೋ, ಮರ್ಯಾದೆಗೇಡು ಹತ್ಯೆ– ಮಾಧ್ಯಮ ದೃಷ್ಟಿಕೋನ, ಕೃಷಿ ಸಂವಹನ– ಒಂದು ಅಧ್ಯಯನ, ಕಲ್ಯಾಣ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಾಧ್ಯಮಗಳ ಪಾತ್ರ. ಬುಡಕಟ್ಟು ಕಾಯ್ದೆಗಳು ಹಾಗೂ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ– ಮಾಧ್ಯಮ ನೋಟ, Role of Media in creating awareness on cybercrime and digital safety (ಇಂಗ್ಲಿಷ್‌ನಲ್ಲಿ ಅಧ್ಯಯನ ವರದಿ ಸಲ್ಲಿಸುವುದು), ಮಾಧ್ಯಮ ಶಿಕ್ಷಣ ಮತ್ತು ವೃತ್ತಿ ನಡುವಿನ ಅಂತರ: ಕಾರಣಗಳು, ಪರಿಣಾಮ ಹಾಗೂ ಪರಿಹಾರ ಫೆಲೋಷಿಪ್ ಅವಧಿ ಆರು ತಿಂಗಳು.

ಅರ್ಜಿ ಸ್ವೀಕರಿಸಲು ಆಗಸ್ಟ್ 2 ಕೊನೆಯ ದಿನವಾಗಿದ್ದು, ವಿಜೇತರ ಆಯ್ಕೆಯಲ್ಲಿ ಅಕಾಡೆಮಿಯ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಅರ್ಜಿ ನಮೂನೆಯನ್ನು ಅಕಾಡೆಮಿಯ ವೆಬ್‌ಸೈಟ್ https://mediaacademy. karnataka. gov.in ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಪೂರಕ ದಾಖಲೆಗಳು ಹಾಗೂ ಅಧ್ಯಯನ ಕುರಿತ ಟಿಪ್ಪಣಿಯೊಂದಿಗೆ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು 560001 ಇವರಿಗೆ ಕಳುಹಿಸಬಹುದು ಅಥವಾ kmafellowship2025@gmail.com ಗೆ ಇ–ಮೇಲ್ ಮೂಲಕ ಕಳಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ

# ರಿಮ್ಸ್ ಬೋಧಕ ಆಸ್ಪತ್ರೆಯಲ್ಲಿ ವಿವಿಧ ಹುದ್ದೆಗಳ ನೇಮಕಾತಿ ಅರ್ಜಿ ಆಹ್ವಾನ

**ರಾಯಚೂರು,ಜು19–** ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ರಿಮ್ಸ್ ಬೋಧಕ ಆಸ್ಪತ್ರೆಯಲ್ಲಿ ವಿವಿಧ ಹುದ್ದೆಗಳನ್ನು ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲೆ 11 ತಿಂಗಳ ಅವಧಿಗೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಿಮ್ಸ್ ಬೋಧಕ ಆಸ್ಪತ್ರೆಯಲ್ಲಿ 67 ಶುಶ್ರೂಷಕ ಅಧಿಕಾರಿಗಳ ಹುದ್ದೆಗಳಿಗೆ ಬಿ.ಎಸ್.ಸಿ ನರ್ಸಿಂಗ್ ವಿದ್ಯಾರ್ಹತೆ ನಿಗದಿಪಡಿಸಲಾಗಿದೆ. (ಬಿ.ಎಸ್.ಸಿ ನರ್ಸಿಂಗ್ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಡಿಪ್ಲೊಮಾ ಇನ್ ನರ್ಸಿಂಗ್ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು). ಸಾಮಾನ್ಯ ಅಭ್ಯರ್ಥಿಗಳಿಗೆ 40 ವರ್ಷ ಹಾಗೂ ಪ.ಜಾತಿ / ಪ.ಪಂಗಡ / ಪ್ರವರ್ಗ –1ರ ಅಭ್ಯರ್ಥಿಗಳಿಗೆ 45 ವರ್ಷ ಮತ್ತು 2ಎ / 2ಬಿ / 3ಎ / 3ಬಿಗೆ 43 ವರ್ಷ ವಯೋಮಿತಿ ನಿಗದಿಪಡಿಲಾಗಿದೆ. ಮೀಸಲಾತಿ ಕೋರುವ ಅಭ್ಯರ್ಥಿಗಳು ಅಗತ್ಯ ಜಾತಿ ಪ್ರಮಾಣ ಪತ್ರ ಲಗತ್ತಿಸುವುದು. ಕಾರ್ಮಿಕ ಇಲಾಖೆ ನಿಗದಿಪಡಿಸಿರುವ ಕನಿಷ್ಠ ವೇತನವನ್ನು ನೀಡಲಾಗುವುದು. ಸಿಟಿ ಸ್ಕಾನ್ ಮತ್ತು ಎಂ.ಆರ್.ಐ ತಂತ್ರಜ್ಞರ 04 ಹುದ್ದೆಗಳಿಗೆ ಬಿ.ಎಸ್.ಸಿ ಇನ್ ಮೆಡಿಕಲ್ ಇಮೇಜಿಂಗ್ ಟೆಕ್ನೋಲೋಜಿ ವಿದ್ಯಾರ್ಹತೆ ಹೊಂದಿರಬೇಕು. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 40 ವರ್ಷ, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 45 ವರ್ಷವನ್ನು ನಿಗದಿಪಡಿಸಲಾಗಿದೆ. ಮೀಸಲಾತಿ ಕೋರುವ ಅಭ್ಯರ್ಥಿಗಳು ಅಗತ್ಯ ಜಾತಿ ಪ್ರಮಾಣ ಪತ್ರ ಲಗತ್ತಿಸುವುದು. 27,500 ರೂ.ಗಳ ವೇತನ ನೀಡಲಾಗುವುದು.

ಅಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಂಸ್ಥೆಯ ಅಂತರ್ಜಾಲ ವಿಳಾಸ: www.rimsraichur. karnataka.gov.in ದಿಂದ ಪಡೆದು ಜುಲೈ 21 ರಿಂದ ಆಗಸ್ಟ್ 04ರ ಸಂಜೆ 4 ಗಂಟೆಯೊಳಗಾಗಿ ಸ್ವ–ವಿವರ ಮತ್ತು ಅಗತ್ಯ ದಾಖಲಾತಿಗಳೊಂದಿಗೆ ಇತ್ತೀಚಿನ ಭಾವಚಿತ್ರ ಲಗತ್ತಿಸಿ ಈ ಕಚೇರಿಗೆ ಖುದ್ದಾಗಿ ಅಥವಾ ಅಂಚೆಯ ಮೂಲಕ ನಿರ್ದೇಶಕರ ಕಚೇರಿ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹೈದ್ರಾಬಾದ್ ರಸ್ತೆ, ರಾಯಚೂರು–584102 ಇಲ್ಲಿಗೆ ತಲುಪಿಸಬಹುದಾಗಿದೆ.

ನೇಮಕಾತಿ ವಿಧಾನವು ಮೆರಿಟ್ ಮತ್ತು ಮೀಸಲಾತಿ ಹಾಗೂ ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುವುದು ಎಂದು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

# ಕ್ರೀಡಾ ಸಾಮಾಗ್ರಿ ಒದಗಿಸುವಂತೆ ಪಂಚಾಯತ ಅಭಿವೃದ್ದಿ ಅಧಿಕಾರಿಗಳಿಗೆ ಮನವಿ

**ಯುವ ಮಾರ್ಗ ಸುದ್ದಿ**

**ಪೊತ್ನಾಳ,ಜು.19–** ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಪೊತ್ನಾಳ ಮಕ್ಕಳ ಹಕ್ಕುಗಳ, ಮಕ್ಕಳು ನಿರಂತರ 16 ವರ್ಷ ಗಳಿಂದ ಗ್ರಾಮಗಳಲ್ಲಿ ಮಕ್ಕಳ ಸಂಸತ್, ಹಕ್ಕುಗಳ ಕ್ಲಬ್ ಗಳನ್ನು ರಚನೆ ಮಾಡಿ, ಅವರಿಗೆ ನಾಯಕತ್ವ, ಬಾಲಕಾರ್ಮಿಕ, ಬಾಲ್ಯ ವಿವಾಹ, ಜೀತಪದ್ದತಿ, ಕಡಿಮೆ ಮಾಡಲು ಮಾಹಿತಿ ನಿಡುತ್ತಾ ಬಂದಿದೆ, ಅದರಂತೆ. ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗಳಾದ ಜೀನೂರ, ಮತ್ತು ಜೀನೂರ ಕ್ಯಾಂಪಿನ ಸಂಸತ್ ಮಕ್ಕಳು ಅಧಿಕಾರಿಗಳನ್ನು ಬೇಟಿ ಮಾಡಿ, ಗ್ರಾಮ ಪಂಚಾಯತ ಅನುದಾನದ ಶೇಕಡಾ 20/ ಅನುದಾನವನ್ನು ಶಾಲೆಗಳ ಮೂಲ ಭೂತ ಕುಡಿಯುವ ನೀರು,



ಕಂಪೌಂಡು, ಸೌರ್ಯಗಳ, ಕಲಿಕಾ ಸಾಮಾಗ್ರಿಗಳಿಗೆ, ಕ್ರೀಡೆ ಸಾಮಾಗ್ರಿಗಳು ಕೊಟ್ಟು ಮಕ್ಕಳಿಗೆ ಆಟ ಆಡಲು ಮತ್ತು ವಲಯ, ತಾಲ್ಲೂಕ ಮಟ್ಟದ ಆಟಗಳಲ್ಲಿ ಉತ್ತಮ ಪ್ರದರ್ಶನ ತೋರಲು ಮಕ್ಕಳಿಗೆ ದೈಹಿಕ ಬೆಳವಣಿಗೆ ಯಾಗಲು ಕ್ರೀಡಾ ಸಾಮಾಗ್ರಿಗಳನ್ನು ಕೊಟ್ಟು ಗ್ರಮೀಣ ಬಾಗದ ಮಕ್ಕಳಿಗೆ ಪ್ರೋತ್ಸಾಹ ಮಾಡುವಂತ ಕೆಲಸ ಸ್ಥಳಿಯ ಸರಕಾರವಾದ ಗ್ರಾಮ ಪಂಚಾಯತಯ ಜವಬ್ದಾರಿ ಆಗಿರುತ್ತದೆ, ಅದಕ್ಕಾಗಿ ಅಧಿಕಾರಿಗಳು ಅದ್ಯಕ್ಷರ,ಸದಸ್ಯರ ಆದಷ್ಟು ಬೇಗ ಗಮನಕ್ಕೆ ತಂದು ಪಂಚಾಯತಿಗೆ ಒಳ ಪಡುವ ಎಲ್ಲಾ ಶಾಲೆಗಳಿಗೆ ಆಟಿಕೆ ಸಾಮಾಗ್ರಿಗಳನ್ನು ಕೊಡಬೇಂದು ಪಂಚಾಯತಿಯ ಕಾರ್ಯದರ್ಶಿಗಳಾದ ಬಸವರಾಜ ಸರ್ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.ಈ ಸಂರ್ದಬದಲ್ಲಿ ಸಿಆರ್‌ಪಿ ಗಳಾದ ಲಕ್ಷ್ಮಿಕಾಂತ ಸರ್, ಪಂಚಾಯತಿಯ, ಕರವಸುಲಿಗಾರರಾದ, ಶಿವರಾಜ, ಸಿಬ್ಬಂದಿಯಾದ, ಹುಚ್ಚಪ್ಪ, ಶಾಲೆಯ ಮುಖ್ಯ ಗುರುಗಳಾದ, ನಾಗಪ್ಪ, ಗಣೇಶ, ಅಶೋಕ,ಶರಣು, ಬಾಗವಹಿಸಿದ್ದರು.

# ಸ್ಕೌಟ್ ಮತ್ತು ಗೈಡ್ಸ್ ನಿಂದ ವಿದ್ಯಾರ್ಥಿಗಳಲ್ಲಿ ದೇಶಭಕ್ತಿ ಹೆಚ್ಚುತ್ತದೆ: ರಾಮಲಿಂಗಪ್ಪ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.19–** ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಭಾರತ ಸ್ಕೌಟ್ ಮತ್ತು ಗೈಡ್ಸ್ ಮತ್ತು ಕಬ್ ಬುಲ್ ಬುಲ್ ಶಾಖೆಯನ್ನು ಉದ್ಘಾಟಿಸಿ ಸ್ಕೌಟ್ಸ ಗೈಡ್ಸ್ ಸಂಸ್ಥೆಯ ತಾಲೂಕ ಕಾರ್ಯದರ್ಶಿ ರಾಮಲಿಂಗಪ್ಪ ಮಾತನಾಡಿ, ಭಾರತ ಸ್ಕೌಟ್ ಮತ್ತು ಗೈಡ್ಸ್ ಇದೊಂದು ರಾಷ್ಟ್ರಮಟ್ಟದ ಸಂಘಟನೆಯಾಗಿದ್ದು ರಾಷ್ಟ್ರಪತಿಗಳು ರಾಜ್ಯಪಾಲರು ಇದರ ಮುಖ್ಯಸ್ಥರಾಗಿರುತ್ತಾರೆ. ವಿ




ದ್ಯಾರ್ಥಿಗಳು ಸ್ಕೌಟ್ ಮತ್ತು ಗೈಡ್ಸ್ ನಲ್ಲಿ ಬೇರೆ ಬೇರೆ ಹಂತದಲ್ಲಿ ಪರಿಣಿತಿ ಪಡೆದಂತೆಲ್ಲಾ ಉತ್ತಮ ಭವಿಷ್ಯರೂಪಿಸಿಕೊಳ್ಳಲು ನೆರವಾಗುತ್ತದೆ. ಆದ್ದರಿಂದ ನಿಮ್ಮ ಅಭ್ಯಾಸದ ಜೊತೆಗೆ ಸ್ಕೌಟ್ ಮತ್ತು ಗೈಡ್ಸ್ ನಲ್ಲಿ ತೊಡ ಗಿಕೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ದೇಶಭಕ್ತಿ, ಶಿಸ್ತು ಮೂಡುತ್ತದೆ ಹಾಗೂ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳುವಲ್ಲಿ ಸಹಕಾ ರಿಯಾಗಿರುತ್ತದೆ ಎಂದು ಎಂದು ತಿಳಿಸಿದರು.

ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ.ಈ.ನರಸಿಂಹ ಕಾರ್ಯದರ್ಶಿ ಕೆ.ವಿಜಯ ಲಕ್ಷ್ಮೀ, ಸಹಕಾರ್ಯದರ್ಶಿ ರವಿವರ್ಮಾ, ಸ್ಕೌಟ್ ಗೈಡ್ಸ್‌ನ ಸಂಘಟಕ ನರಸಿಂಹ ದೇಸಾ ಯಿ, ಜಿಲ್ಲಾ ಸಂಘಟಕರಾದ ಅಂಬಣ್ಣ ನಾಯಕ ಶಾಲಾ ಶಾಖೆಯ ಸಂಘಟಕರಾದ ಬಸವರಾಜ್, ಮರೇಗೌಡ, ವಿನೂತಾ, ಸುಪಿಯಾ, ಕಾವ್ಯ, ಪ್ರಶಾಂತಿ ಸೇರಿದಂತೆ ಇನ್ನಿತರರು ಇದ್ದರು.

ಶಾಲೆಯಲ್ಲಿನ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ತರ ಬೇತಿಯನ್ನು ಪಡೆದುಕೊಂಡರು

# ನಿರ್ಧಿಷ್ಟ ಗುರಿ ಹಾಗೂ ಕಠಿಣ ಪರಿಶ್ರಮದಿಂದ ಮಾತ್ರ ಯಶಸ್ಸು ಸಾಧ್ಯ – ಫಾ.ಸಿಪ್ರಿಯನ್ ಎಸ್.ಜೆ.



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.19–**ಪಟ್ಟಣದ ಲೊಯೋಲ ಸಮಾಜ ಸೇವಾ ಕೇಂದ್ರದಲ್ಲಿ ಇಂದು ವಿವಿಧ ಹಳ್ಳಿಗಳ ಅಸಂಘಟಿತ ಯುವಕ ಯುವತಿಯರಿಗೆ ಜೀವನೋಪಾಯ ತರಬೇತಿ, ವೃತ್ತಿ ಮಾರ್ಗದರ್ಶನ ಮತ್ತು ಡ್ರೈವಿಂಗ್ ಲೈಸೆನ್ಸಳನ್ನು ವಿತರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಲೊಯೋಲ ಸಮಾಜ ಸೇವಾ ಕೇಂದ್ರದಿಂದ ಅಸಂಘಟಿತ ಯುವಕ ಯುವತಿಯರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಜೀವನೋಪಾಯ ತರಬೇತಿ, ವೃತ್ತಿ ಮಾರ್ಗದರ್ಶನ ಮತ್ತು ಡ್ರೈವಿಂಗ್ ಲೈಸೆನ್ಸಳನ್ನು ವಿತರಣೆ ಕಾರ್ಯಕ್ರಮವನ್ನು ದೀಪಾ ಬೆಳಗಿಸುವ ಮೂಲಕ ಉದ್ಘಾಟಿಸಲಾಯಿತು. ನಂತರ ಮಾತನಾಡಿದ ಶ್ರಾವಣ್ ಕುಮಾರ್ ಇನ್ ಹೌಸ್ ಪ್ಯಾಕಲ್ಟಿ ಎಸ್.ಬಿ.ಐ ಗ್ರಾಮೀನ್ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ರಾಯಚೂರು ಇವರು ಮಾತನಾಡುತ್ತಾ ಯುವಕ ಯುವತಿಯರು ತಮ್ಮ ಕಲಿಕೆಯ ಜೊತೆಗೆ ಕೈ ಕೆಲಸಗಳನ್ನು ಕಲಿತುಕೊಳ್ಳಿ ಹಾಗೂ ಇಂದು ನೀವು ಪಡೆಯುವ ಯಾವುದೇ ಕೌಶಲ್ಯಗಳು ಮುಂದಿನ ದಿನಮಾನಗಳಲ್ಲಿ ನಿಮ್ಮ ಜೀವನಕ್ಕೆ ಆಧಾರವಾಗಿ ನಿಲ್ಲುತ್ತವೆ ಎಂದರು ಜೊತೆಗೆ ತಮ್ಮ ಸಂಸ್ಥೆಯಲ್ಲಿ ನಡೆಯುವ ಮೊಬೈಲ್ ರಿಪೇರಿ, ಪ್ಲಬಿಂಗ್, ಎಲೆಕ್ಟ್ರಿಕಲ್ಸ್ ಜೊತೆಗೆ ಎಂಬ್ರಾಯಿಡರಿ, ಮೆಹಂದಿ, ಟೆಲರಿಂಗ್, ಬ್ಯುಟಿಪಾರ್ಲರ್ ಹೀಗೆ ಮುಂತಾದ ತರಬೇತಿ ಕಾರ್ಯಕ್ರಮಗಳು ಸಂಸ್ಥೆಯಲ್ಲಿ ನಡೆಯುತ್ತವೆ ಅವುಗಳ ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು. ನಂತರ ವೃತ್ತಿ ಮಾರ್ಗದರ್ಶನ ಕುರಿತು ಮಾತನಾಡಿದ ಶರಣ ಕುಮಾರ್ ಇವರು ಯುವಕ ಯುವತಿಯರು ಪ್ರಸ್ತುತ ದಿನಮಾನಗಳಲ್ಲಿ ಅತಿಯಾದ ಆನಲೈನ್ ಆಟಗಳು, ಚಾಟಿಂಗ್ ಮತ್ತು ದುಷ್ಟಚಟಗಳಾಗಿ ದಾಸರಾಗಿದ್ದಾರೆ ಅದರ ಬದಲಾಗಿ ಉತ್ತಮ ವ್ಯಾಸಂಗ ಪಡೆದು ಸ್ವಂತ ಉದ್ಯೋಗಗಳಿಗೆ ಮುಂದಾಗಬೇಕು ಹಾಗೂ ನಮ್ಮ ಮುಂದಿನ ಜೀವನದ ಬಗ್ಗೆ ಅಲೋಚಿಸಬೇಕು ಎಂದು ತಿಳಿ ಹೇಳಿದರು.

ಬೆಂಗಳೂರಿನ ಸಂತ ಜೋಸೆಫ್‌ರ ಕೌಶಲ್ಯ ತರಬೇತಿ ಅಕಾಡೆಮಿಯ ಪ್ರಾಂಶುಪಾಲರಾದ ಫಾ.ಜೆಸನ್ ಮಾರ್ಟಿಸ್ ಇವರು ಆನಲೈನ್ ಮೂಲಕ ಮಾತನಾಡಿ ತಮ್ಮ ಸಂಸ್ಥೆಯ ಕಾರ್ಯಕ್ರಮಗಳ ಕುರಿತು ಹಾಗೂ ತಮ್ಮಲ್ಲಿ ಇರುವ ವಿವಿಧ ಕೌಶಲ್ಯ ತರಬೇತಿಗಳ ಕುರಿತು ಮಾಹಿತಿ ಹಂಚಿಕೊಂಡರು ಪ್ರಮುಖವಾಗಿ ನರ್ಸಿಂಗ್, ಬ್ಯುಟಿಷೀಯನ್, ಎಲೆಟ್ರಿಷಿಯನ್, ಹೊಟೇಲ್ ಮ್ಯಾನೇಜಮೆಂಟ್, ಹೀಗೆ ಮುಂತಾದ ಕೋರ್ಸಗಳ ಬಗ್ಗೆ ತಿಳಿಸಿದರು. ನಮ್ಮ ಲೊಯೋಲ ಸಮಾಜ ಸೇವಾ ಕೇಂದ್ರದ ಸಹಾಯಕ ನಿರ್ದೇಶಕರಾದ ಫಾ.ಜಾರ್ಜ ಇವರು ಮಾತನಾಡಿ ನಮ್ಮ ಸಂಸ್ಥೆಯಲ್ಲಿ ನಡೆಯುತ್ತಿರುವ ಅಸಂಘಟಿತ ಯುವಕ ಯುವತಿಯರ ಕಾರ್ಯಕ್ರಮಗಳ ರೂಪುರೇಷಗಳ ಕುರಿತು ಮಾತನಾಡಿದರು. ಅಧ್ಯಕ್ಷೀಯ ನುಡಿಗಳನ್ನಾಡಿ ನಿರ್ದೇಶಕರಾದ ಫಾ.ಸಿಪ್ರಿಯನ್ ಇವರು ಮಾತನಾಡಿ ಯುವಕ ಯುವತಿಯರಲ್ಲಿ ನಿರ್ಧಿಷ್ಟ ಗುರಿ ಹಾಗೂ ಕಠಿಣ ಪರಿಶ್ರಮ ಇದ್ದಾಗ ಮಾತ್ರ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದು ತಿಳಿಸಿದರು. ಇನ್ನು ಹೆಚ್ಚು ಹೆಚ್ಚು ಯುವಕರು ತರಬೇತಿಗಳಲ್ಲಿ ಭಾಗವಹಿಸಬೇಕು ಹಾಗೂ ಅವುಗಳ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು. ಕೊನೆಯಲ್ಲಿ ಕಳೆದ ತಿಂಗಳುಗಳಲ್ಲಿ ನಡೆಸಿದ ಡ್ರೈವಿಂಗ್ ತರಬೇತಿಯಲ್ಲಿ ಭಾಗವಹಿಸಿದ 19 ಜನ ಯುವಕರಿಗೆ ಡ್ರೈವಿಂಗ್ ಲೈಸೆನ್ಸ್ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಫಾ.ಸಿಪ್ರಿಯನ್ ಟೆಲ್ಲಿಸ್ ಎಸ್.ಜೆ. ಸಹಾಯ ನಿರ್ದೇಶಕರಾದ ಫಾ.ಜಾರ್ಜ ಎಸ್.ಜೆ. ಹಾಗೂ ಯುವಕ ಯುವತಿಯರ ಸಂಘದ ಅಧ್ಯಕ್ಷರಾದ ಎಲಿಯಾಸ್ ಉಪಾಧ್ಯಕ್ಷರಾದ ಸಿದ್ದಪ್ಪ ಅಮರಾವತಿ ಹಾಗೂ ಸಂಸ್ಥೆಯ ಎಲ್ಲಾ ಸಿಬ್ಬಂದಿಗಳು ವಿವಿಧ ಹಳ್ಳಿಗಳಿಂದ ಯುವಕ ಯುವತಿಯರು ಕಾರ್ಯಕ್ರಮಕ್ಕೆ ಆಗಮಿಸಿದ್ದರು.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜು.19–** ಇಲ್ಲಿನ ತಾಲೂಕು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಪಿಯುಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸು ಮತ್ತು ಪದವಿ ಮಟ್ಟದ ಕೋರ್ಸುಗಳ ವಿದ್ಯಾರ್ಥಿಗಳಿಂದ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ (ಉನ್ನತ್ತಿಕರಿಸಿದ) ಬೋಳಮಾನದೊಡ್ಡಿ ರಸ್ತೆ, ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ವಿವೇಕನಂದ ಲೇಓಟ್ ಲಯನ್ಸ್ ಶಾಲೆ ಹತ್ತಿರ ರಾಯಚೂರು (ಜಹಿರಬಾದ್), ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ ಆಶಾಪೂರುರಸ್ತೆ ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ ಕೇಂದ್ರಿಯಾ ವಿದ್ಯಾಲಯ ಹತ್ತಿರ ಆಶಾಪೂರು ರಸ್ತೆ ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ ಬೈಪಾಸ್‌ರೋಡ್ ಯರಮರಸ್ ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ ಕೃಷಿ ವಿದ್ಯಾಲಯ ಲಿಂಗಸೂಗುರು ರೋಡ್ ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ (ವೃತ್ತಿಪರ) ಯರಮರಸ್ ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕೀಯರ ವಸತಿ ನಿಲಯ ಕೃಷಿ ವಿದ್ಯಾಲಯ ಲಿಂಗಸೂಗುರು ರೋಡ್ ರಾಯಚೂರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ ದೇವದುರ್ಗ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ ದೇವದುರ್ಗದ ವಸತಿನಿಲಯಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹತೆಗಳು: ವಿದ್ಯಾರ್ಥಿಗಳು ಸರ್ಕಾರಿಅಥವಾಅಂಗೀಕೃತ ಶಾಲಾ/ಕಾಲೇಜುಗಳಲ್ಲಿ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ತರಗತಿಗಳಲ್ಲಿ ಆಧ್ಯಾಯನ ಮಾಡುತ್ತಿರಬೇಕು. ವಸತಿ ನಿಲಯಗಳಲ್ಲಿ ಶೇ.75 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶೇ.25 ಇತರೆ ವರ್ಗದ ವಿದ್ಯಾರ್ಥಿಗಳಿಗೆ ಮೀಸಲಿಡಲಾಗಿದೆ.

ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಹಿಂದುವಳಿದ ವರ್ಗಗಳ 2ಎ, 3ಎ, 3ಬಿ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಪ್ರವರ್ಗ–1, ಕುಟುಂಬದ ವಾರ್ಷಿಕ ವರಮಾನ 1.00 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಅರ್ಜಿಯೊಂದಿಗೆ ತಹಸೀಲ್ದಾರರು ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸ ಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಅಂಕಪಟ್ಟಿ ಹಾಗೂ ವಿದ್ಯಾರ್ಥಿಯ ಪಾಸ್‌ಪೋಟೋ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಮತ್ತು ನಿಗಧಿಪಡಿಸಿದ ದಿನಾಂಕದೊಳಗೆ ಅರ್ಜಿ ಸಲ್ಲಿಸುವುದು.

ಆಸಕ್ತ ಮೆಟ್ರಿಕ್ ನಂತರದ ಬಾಲಕರ ಅಥವಾ ಬಾಲಕಿಯರ ವಸತಿ ನಿಲಯಗಳ ಪ್ರವೇಶಾತಿಗಾಗಿ ಎಸ್‌ಹೆಚ್‌ಪಿ ವೆಬ್‌ಸೈಟ್ ವಿಳಾಸ: https://shp.karnataka.gov.in ನಲ್ಲಿ ಆಗಸ್ಟ್ 02ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕದ ನಂತರ ಸ್ವೀಕೃತವಾಗುವ ಅರ್ಜಿ ಅಥವಾ ಕೋರಿಕೆಗಳನ್ನು ಪರಿಗಣಿಸಲು ಅವಕಾಶವಿರುವುದಿಲ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರಾಯಚೂರು ಅಥವಾ ತಾಲ್ಲೂಕು ಅಲ್ಪಸಂಖ್ಯಾತರ ಅರಿವು ಮೂಡಿಸುವ ಮಾಹಿತಿ ಕೇಂದ್ರ ಹಾಗೂ ಹತ್ತಿರದ ವಸತಿ ನಿಲಯಗಳಿಗೆ ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರಕಲ್ಯಾಣ ಇಲಾಖೆ ರಾಯಚೂರು ಉಪ ವಿಭಾಗದ ತಾಲ್ಲೂಕು ವಿಸ್ತರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಮಹಾನಗರ ಪಾಲಿಕೆಯಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜು.19–** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2025–26ನೇ ಸಾಲಿನ ಎಸ್.ಎಫ್.ಸಿ ಅನುದಾನದಲ್ಲಿ ಶೇ.7.25 ಇತರೆ ಹಿಂದುಳಿದ ಜನಾಂಗದ ಮತ್ತು ಶೇ.5 ವಿಕಲಚೇತನರ ವೈಯಕ್ತಿಕ ಸಂಬಂಧಿತ ಕಲ್ಯಾಣ ಕಾರ್ಯಕ್ರಮದಲ್ಲಿ ಪಾಲಿಕೆ ವ್ಯಾಪ್ತಿ ಪ್ರದೇಶದ ಅರ್ಹ ಫಲಾನುಭವಿಗಳಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಚಟುವಟಿಕೆಯಡಿ ಶೇ.7.25ರ ಇತರೆ ಹಿಂದುಳಿದ ಜನಾಂಗದ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ 1.85 ಲಕ್ಷ ರೂ.ಗಳನ್ನು ಅಂದಾಜು ಮೊತ್ತ ಕಾಯ್ದಿರಿಸಲಾಗಿದೆ. ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಮಾಚವಣೆ ದುರಸ್ತಿ ಸಾಮಗ್ರಿಗಳು ಅಥವಾ ಅವಶ್ಯಕ ಸಾಮಗ್ರಿಗಳನ್ನು ಖರೀದಿಸಲು 40000 ರೂ.ಗಳನ್ನು ಒಂದು ಬಾರಿ ಒಟ್ಟು 18 ಅಭ್ಯರ್ಥಿಗಳಿಗೆ ಧನಸಹಾಯ ನೀಡಲಾಗುವುದು.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಅದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ, ಪಾಸ್ ಫೋಟೋ ಅಳತೆಯ ಭಾವ ಚಿತ್ರ–2, ಬ್ಯಾಂಕ್ ಪಾಸ್ ಪುಸ್ತಕ ಹಾಗು ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಎ. ಕಾರ್ಡ, ಮನೆಯ ಮೇಲ್ಮಾವಣೆ ಛಾಯಾ ಚಿತ್ರ./ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಜಾಗದ ಛಾಯಾಚಿತ್ರ, ಮೊಬೈಲ್ ನಂಬರ್‌ನೊಂದಿಗೆ ಜುಲೈ 31ರ ಸಂಜೆ 5ಗಂಟೆಯೊಳಗಾಗಿ ಅಗತ್ಯ ದಾಖಲಾತಿಗಳು ಕಡ್ಡಾಯವಾಗಿ ನಿಗದಿತ ದಿನಾಂಕ ಒಳಗಡೆ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೆ ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H